ಸಂಪುಟ : 11 ಸಂಚಿಕೆ: 29 ಪುಟ : 4+2 ಬೆಲೆ: 3.00 ಶುಕ್ರವಾರ ಫೆಬ್ರವರಿ 27 2026 Mob : 9448326533- 9019256545 ಗದಗ

ಸಂಪಾದಕರು : ಎಚ್.ಎಮ್. ಶರೀಫನವರ್

# ವಿಜಯ ಸಾಕ್ಷಿ

ವಾಸ್ತವ, ವಸ್ತುನಿಷ್ಠ, ವಿಭಿನ್ನ... VIJAYASAKSHI KANNADA DAILY ಕನ್ನಡ ದಿನಪತ್ರಿಕೆ




Volume : 11 Issue : 29 Pages : 4+2 Price : 3.00 Friday February 27 2026 Gadag RNINo:KARKAN/2015/63412 E-mail: vijayasakshidaily@gmail.com Post Regn.No:GDG/72/2023-25

## ಕಾಮರತಿ ಉತ್ಸವದ ಪದಾಧಿಕಾರಿಗಳ ಆಯ್ಕೆ

**■ ವಿಜಯಸಾಕ್ಷಿ ಸುದ್ದಿ, ಗದಗ**

ಇಲ್ಲಿನ ಹಾಳದಿಬ್ಬ ವಿವಿಧೋದ್ದೇಶಗಳ ಸೇವಾ ಸಂಸ್ಥೆಯ ಅಧ್ಯಕ್ಷ ಕುಮಾರ ಮಂದಾಲಿಯವರ ಅಧ್ಯಕ್ಷತೆಯಲ್ಲಿ 2026ನೇ ಸಾಲಿನ ಕಾಮರತಿ ಉತ್ಸವದ ಪದಾಧಿಕಾರಿಗಳನ್ನು ಆಯ್ಕೆ ಮಾಡಲಾಯಿತು.

ಗೌರವ ಅಧ್ಯಕ್ಷರಾಗಿ ಯಲ್ಲನಗೌಡ ದೇಸಾಯಿ, ಅಧ್ಯಕ್ಷರಾಗಿ ಉಪೇಂದ್ರ ವಾಸುದೇವ ಹುಯಿಲಗೋಳ, ಉಪಾಧ್ಯಕ್ಷರಾಗಿ ಬಸವರಾಜ ಅರಗಂಜೀ, ಕಾರ್ಯದರ್ಶಿಯಾಗಿ ರಾಕೇಶ ನವಲಗುಂದ, ಖಜಾಂಚಿಯಾಗಿ ಸದಾನಂದ ಸಿಂಗ್ ಗುರ್ಲಹೊಸುರ, ಸದಸ್ಯರಾಗಿ ವಿನಾಯಕ ಹುಯಿಲಗೊಳ, ಸಾಗರ ಹುಯಿಲಗೋಳ, ರಕ್ಷಿತ ನವಲಗುಂದ, ವಿನಾಯಕ ಕಪಲಿ, ಪಂಚಾಕ್ಷರಿ ಸಾಲಿಮಠ, ವಿನಾಯಕ ಕಲಬಂಡಿ, ಶಿವು ಕನ್ನೂರ, ಅಭಿಷೇಕ ಕರಿಯವರ, ಕೃಷ್ಣಾ ಹುಯಿಲಗೋಳ, ಮಹೇಶ ನರೇಗಲ್, ನಾಗರಾಜ ಜಡಿಯವರ, ಮಂಜು ಪಾಟೀಲ್, ಮಂಜು ವಡ್ಡಟ್ಟಿ, ಸುಜಲ್ ನಾಕೋಡ, ಸಚಿನ್ ಹುಯಿಲಗೋಳ, ಶುಭಂ ನಾಕೋಡ, ಬಾಪುಗೌಡ ದೇಸಾಯಿ, ಮನೋಜ ಪಾಟೀಲ್ ಆಯ್ಕೆಯಾದರು.

ಮಾರ್ಗದರ್ಶಕರಾಗಿ ಈರಣ್ಣಾ ಖಾನಪ್ಪನವರ, ವಾಸುದೇವ ಹುಯಿಲಗೊಳ, ನಾರಾಯಣದಾಸ ಪುಣೇಕರ, ರಮೇಶ ಮಂದಾಲಿ, ಗಿರಿಯಪ್ಪ ಅಸೂಟಿ, ಬಸವರಾಜ ಕಲ್ಲಬಂಡಿ, ಶಿವಾಜಿ ಅರಸಿದ್ದಿ, ರುದ್ದಪ್ಪ ಕಲ್ಲಭಂಡಿ, ಅಶೋಕ ಮಂದಾಲಿ, ಗೋಪಾಲ ನಾಕೋಡ, ದೀಪಕ ನಾಕೋಡ, ಶ್ರೀನಿವಾಸ ಹುಯಿಲಗೋಳ, ಪರಶುರಾಮ ಆಲೂರ, ಗೋಪಾಲ ಹುಯಿಲಗೋಳ, ಮಲ್ಲಿಕಾರ್ಜುನ ಹಿರೇಮಠ ಇವರನ್ನು ಸಭೆಯಲ್ಲಿ ಸರ್ವಾನುಮತದಿಂದ ಆಯ್ಕೆ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.

## ಜೆಡಿ (ಎಸ್) ಜನತಾ ಸಮಾವೇಶ: ಗದಗದಲ್ಲಿ ಬೃಹತ್ ಆಟೋ ರಿಕ್ಷಾ ಮೆರವಣಿಗೆ



**■ ವಿಜಯಸಾಕ್ಷಿ ಸುದ್ದಿ, ಗದಗ**

ವಿಜಯಪುರದಲ್ಲಿ ನಡೆಯಲಿರುವ ಜನತಾದಳ (ಜಾತ್ಯಾತೀತ) ಪಕ್ಷದ ಜನತಾ ಸಮಾವೇಶದ ಪೂರ್ವಭಾವಿಯಾಗಿ ಗದಗ ನಗರದಲ್ಲಿ ಗುರುವಾರ ಭಾರೀ ಆಟೋ ರಿಕ್ಷಾ ಮೆರವಣಿಗೆ ನಡೆಯಿತು.

ನಗರದ ಮಹಾತ್ಮ ಗಾಂಧಿ ವೃತ್ತದಲ್ಲಿ ಮೆರವಣಿಗೆಗೆ ಚಾಲನೆ ನೀಡಿದ ಜೆಡಿಎಸ್ ರಾಜ್ಯ ವಕ್ತಾರ ವೆಂಕನಗೌಡ ಆರ್. ಗೋವಿಂದಗೌಡ್ರ ಮಾತನಾಡಿ, "ಜೆಡಿಎಸ್ ಪಕ್ಷಕ್ಕೆ ಸಮೃದ್ಧ ಇತಿಹಾಸವಿದ್ದು, ಮುಂದಿನ ದಿನಗಳಲ್ಲಿ ಉಜ್ವಲ ಭವಿಷ್ಯ ಕಾದಿದೆ. ಬರುವ ವಿಧಾನಸಭಾ ಚುನಾವಣೆಯಲ್ಲಿ ಪಕ್ಷ ಹೊಸ ಇತಿಹಾಸ ನಿರ್ಮಿಸಲಿದೆ," ಎಂದು ವಿಶ್ವಾಸ ವ್ಯಕ್ತಪಡಿಸಿದರು.

ಈ ವೇಳೆ ಗದಗ ತಾಲೂಕು ಅಧ್ಯಕ್ಷ ಬಸವರಾಜ ಅಪ್ಪಣ್ಣವರ, ಗದಗ ನಗರ ಅಧ್ಯಕ್ಷ ಪ್ರಫುಲ್ ಪುಣೇಕರ, ಜಿಲ್ಲಾ ವಕ್ತಾರ ಜಿ.ಕೆ. ಕೊಳ್ಳಿಮಠ, ಜಿಲ್ಲಾ ಪಂಚಾಯತ್ ಮಾಜಿ ಅಧ್ಯಕ್ಷ ಹಾಗೂ ಹಿರಿಯ ಮುಖಂಡ ವೀರನಗೌಡ ನಾಡಗೌಡ್ರು, ಸಿದ್ದಲಿಂಗಯ್ಯ ಹೊಂಬಾಳಿಮಠ, ಪ್ರಭುರಾಜ್ ಗೌಡ ಪಾಟೀಲ್ ಸೇರಿದಂತೆ ಹಲವು ಕಾರ್ಯಕರ್ತರು ಉಪಸ್ಥಿತರಿದ್ದರು.

ಮೆರವಣಿಗೆ ಗದಗ ನಗರದ ಪ್ರಮುಖ ಬೀದಿಗಳಲ್ಲಿ ಸಂಚರಿಸಿ, ಅಂತಿಮವಾಗಿ ಪುಟ್ಟರಾಜ ಗವಾಯಿ ಅವರ ಮೂರ್ತಿಗೆ ಮಾಲಾರ್ಪಣೆ ಮಾಡುವುದರೊಂದಿಗೆ ಸಮಾಪ್ತಿಗೊಂಡಿತು.

### 'ಅವ್ವ' ಟ್ರಸ್ಟ್ ಕೊಡಮಾಡುವ ದತ್ತಿ ಪ್ರಶಸ್ತಿ ವಿತರಿಸಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಅಭಿಮತ

# ಪತ್ರಿಕೋದ್ಯಮದ ಕನ್ನಡಿಯಲ್ಲಿ ಭಾರತದ ಹಳ್ಳಿಗಳು ಕಾಣಿಸಬೇಕು

**■ ವಿಜಯಸಾಕ್ಷಿ ಸುದ್ದಿ, ಗದಗ**

ತಮ್ಮ ಸುಖ ತ್ಯಾಗ ಮಾಡಿದ ತಾಯಿ–ತಂದೆ ವೃದ್ಧಾಶ್ರಮ ಕಾಣುವಂತಾಗಿರುವುದು ಬೇಸರದ ಸಂಗತಿ. ಆದರೆ ಬಸವರಾಜ ಹೊರಟ್ಟಿ ಅವರು ತಾಯಿಯ ಹೆಸರಲ್ಲಿ ಅವ್ವ ಸೇವಾ ಟ್ರಸ್ಟ್ ಸ್ಥಾಪಿಸಿ ಆ ಮೂಲಕ ಸಮಾಜದಲ್ಲಿ ವಿವಿಧ ಕಾರ್ಯಕ್ರಮಗಳ ಆಯೋಜನೆಗೆ ಕಾರಣೀಕರ್ತರಾಗಿರುವುದು ಮಾದರಿಯಾಗಿದೆ ಎಂದು ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ್ ಶ್ಲಾಘಿಸಿದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದಲ್ಲಿ ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ 2025ನೇ ಸಾಲಿನ 'ದತ್ತಿ ನಿಧಿ' ಪ್ರಶಸ್ತಿಯನ್ನು ನಗರದ ಹೊರವಲಯದಲ್ಲಿರುವ ಗ್ರಾಮ ಗಂಗೋತ್ರಿ ಆವರಣದ



ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕಾರ್ಯಕ್ರಮದಲ್ಲಿ ಪತ್ರಕರ್ತೆ ತನುಜಾ ನಾಯಕ ಅವರಿಗೆ ಪ್ರದಾನ ಮಾಡಿ ಮಾತನಾಡಿದರು.

ಮಾತೋಶ್ರೀ ಗುರುವ್ವ ಶಿವಲಿಂಗಪ್ಪ ಹೊರಟ್ಟಿ ಈ ಕಾರ್ಯಕ್ರಮದ ನೈತಿಕ ಶಕ್ತಿಯಾಗಿದ್ದಾರೆ. ಈ ತಾಯಿಯ ಕಾಳಜಿ, ಸಂಸ್ಕಾರ ಮತ್ತು ಕನವರಿಕೆಗಳನ್ನು ಅಕ್ಷರಕ್ಕೆ ಇಳಿಸುತ್ತಾ ಇವರ ಹೆಸರಿನ ಪ್ರಶಸ್ತಿ ಸ್ವೀಕರಿಸುತ್ತಿರುವ ಸುನಂದಾ ನಾಯಕ ಅವರ ಆಯ್ಕೆ ಅತ್ಯಂತ ಸೂಕ್ತವಾಗಿದೆ. ಇವತ್ತಿನ ಈ ಕಾರ್ಯಕ್ರಮವೇ ಅವ್ವ ಗುರವ್ವ ಅವರ ಸಂಸ್ಕಾರ ಮತ್ತು ಚೈತನ್ಯದ ಜೀವಂತಿಕೆಗೆ ಸಾಕ್ಷಿಯಾಗಿದೆ ಎಂದು ಅಭಿಪ್ರಾಯಪಟ್ಟರು.

ಕೇಂದ್ರ ಸರ್ಕಾರ ನೋಟು ನಿಷೇಧ ಜಾರಿಗೆ ತಂದಾಗ ನಗರ ಕೇಂದ್ರಿತ ಆರ್ಥಿಕತೆ, ದುಡಿಮೆ ಎಲ್ಲಾ ನೆಲಕಚ್ಚಿತು. ಆದರೆ, ಇಡೀ ದೇಶದ ಆರ್ಥಿಕತೆ ಪೂರ್ತಿ ನೆಲ ಕಚ್ಚದಂತೆ ಕಾಪಾಡಿದ್ದು ನಮ್ಮ ಗ್ರಾಮೀಣ ಆರ್ಥಿಕತೆ. ಸಾಸಿವೆ ಡಬ್ಬಿ, ಎಲೆ ಅಡಿಕೆ ಚೀಲದಲ್ಲಿ ಗ್ರಾಮೀಣ ಮಹಿಳೆಯರು ಕಾಪಿಡುವ, ಉಳಿತಾಯ ಮಾಡುವ ಹಣ ಕೋವಿಡ್ ಸಂದರ್ಭದಲ್ಲಿ ಸಾವಿರಾರು ಕುಟುಂಬಗಳ ಬದುಕಿಗೆ ಆಸರೆ ಆಗಿದ್ದನ್ನು ನಾವು ನೆನಪಿಸಿಕೊಳ್ಳಬೇಕು. ಹೀಗಾಗಿ ಭಾರತದ ಗ್ರಾಮೀಣಾಭಿವೃದ್ಧಿಗೆ ಪತ್ರಿಕೋದ್ಯಮ ಸೇತುವೆಯಾಗಿ ಕೆಲಸ ಮಾಡಬೇಕಿದೆ ಎಂದರು.

ಮುಖ್ಯಮಂತ್ರಿಗಳು ಯಾವುದೇ ಜಿಲ್ಲೆಯ ಕೆಡಿಪಿ ಸಭೆಗಳನ್ನು ನಡೆಸುವಾಗ ಆಯಾ ಜಿಲ್ಲೆಗಳ ಗ್ರಾಮೀಣ ಬದುಕಿನ ಬಗ್ಗೆ ಪತ್ರಿಕೆಗಳಲ್ಲಿ ಬಂದಿರುವ ವರದಿಗಳನ್ನು ಮೊದಲು ಗಮಿಸುತ್ತಾರೆ. ಕೊರತೆಗಳ ಬಗ್ಗೆ ವರದಿಯಾಗಿದ್ದರೆ ಸಂಬಂಧಪಟ್ಟ ಇಲಾಖೆಗಳ ಅಧಿಕಾರಿಗಳನ್ನು ಮುಖ್ಯಮಂತ್ರಿಗಳು ತರಾಟೆಗೆ ತೆಗೆದುಕೊಳ್ಳುವುದನ್ನು ನೀವೂ ಗಮನಿಸಿರುತ್ತೀರಿ.

ಕಲುಷಿತ ನೀರು ಕುಡಿದು ಸಾವನ್ನಪ್ಪಿದ ವರದಿಗಳು ಸರ್ಕಾರವನ್ನು ಎಚ್ಚರಿಸಿವೆ. ಬೆಳೆ ರೋಗದ ಬಗ್ಗೆ ಬಂದ ವರದಿಗಳು ಸಾವಿರಾರು ರೈತ ಕುಟುಂಬಗಳಿಗೆ ಪರಿಹಾರ ಒದಗಿಸಲು ನೆರವಾಗಿವೆ ಎಂದರು.

▶▶ 3ನೇ ಪುಟಕ್ಕೆ

> ಆದರ್ಶಪ್ರಾಯ ಅವ್ವನ ಹೆಸರಿನ ಪ್ರಶಸ್ತಿಗೆ ತನುಜಾ ನಾಯಕ ಅವರನ್ನು ಆಯ್ಕೆ ಮಾಡಿರುವುದು ಹೆಚ್ಚು ಸೂಕ್ತವಾಗಿದೆ. ಮಹಿಳಾ ಸಂವೇದನೆ, ಕೌಟುಂಬಿಕ ಮೌಲ್ಯಗಳು, ಸಾಮಾಜಿಕ ಜಾಗೃತಿ ಮತ್ತು ಜೀವನ ಪ್ರೀತಿಯನ್ನು ಸಾರುವಂತಹ ಲೇಖನಗಳನ್ನು ನಿರಂತರವಾಗಿ ಬರೆಯುತ್ತಿರುವ ತನುಜಾ ನಾಯಕ ಅವರ ಸಾಮಾಜಿಕ ನೋಟ ಇವತ್ತಿನ ಕಿರಿಯ ವೃತ್ತಿ ಬಾಂಧವರಿಗೆ ಮಾದರಿಯಾಗಿದ್ದಾರೆ.
>
> **– ಕೆ.ವಿ. ಪ್ರಭಾಕರ.**
> ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರರು.

### ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಪೂರ್ವಭಾವಿ ಸಭೆಯಲ್ಲಿ ಡಿಸಿ. ಸಿ.ಎನ್. ಶ್ರೀಧರ್

# 'ಜನತಾ ದರ್ಶನ'ವನ್ನು ಸಮರ್ಪಕವಾಗಿ ಆಯೋಜಿಸಿ



**■ ವಿಜಯಸಾಕ್ಷಿ ಸುದ್ದಿ, ಗದಗ**

ಜನತಾ ದರ್ಶನವು ಸಾರ್ವಜನಿಕರ ಅಹವಾಲುಗಳಿಗೆ ತ್ವರಿತ ಪರಿಹಾರ ಒದಗಿಸುವ ಮಹತ್ವದ ವೇದಿಕೆಯಾಗಿದ್ದು, ಯಾವುದೇ ತೊಂದರೆ ಉಂಟಾಗದಂತೆ ಪೂರ್ವಸಿದ್ಧತೆಗಳನ್ನು ಕೈಗೊಳ್ಳಬೇಕು ಎಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ನಗರದ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ನಡೆದ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮ ಕುರಿತ ಪೂರ್ವಸಿದ್ಧತಾ ಸಭೆಯಲ್ಲಿ ಅವರು ಮಾತನಾಡಿದರು.

ಜಿಲ್ಲಾ ಉಸ್ತುವಾರಿ ಸಚಿವರ ನೇತೃತ್ವದಲ್ಲಿ ನಡೆಯಲಿರುವ ಜಿಲ್ಲಾ ಮಟ್ಟದ ಜನತಾ ದರ್ಶನ ಕಾರ್ಯಕ್ರಮವನ್ನು ಸಮರ್ಪಕವಾಗಿ, ಶಿಸ್ತಿನೊಂದಿಗೆ ಆಯೋಜಿಸುವಂತೆ ಅಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಲಾಯಿತು.

ಕಾರ್ಯಕ್ರಮದಲ್ಲಿ ಭಾಗವಹಿಸುವ ಪ್ರತಿಯೊಬ್ಬ ಅರ್ಜಿದಾರರಿಗೂ ಸರಿಯಾದ ಮಾರ್ಗದರ್ಶನ ನೀಡಬೇಕು ಹಾಗೂ ಅವರ ಅರ್ಜಿಗಳನ್ನು ತಕ್ಷಣ ದಾಖಲಿಸಿ ಸಂಬಂಧಿಸಿದ ಇಲಾಖೆಗೆ ರವಾನಿಸುವ ವ್ಯವಸ್ಥೆ ಇರಬೇಕು ಎಂದರು.

ಜನತಾ ದರ್ಶನ ಕಾರ್ಯಕ್ರಮವು ಜನರಲ್ಲಿ ಸರ್ಕಾರದ ಮೇಲೆ ವಿಶ್ವಾಸ ಹೆಚ್ಚಿಸುವ ಪ್ರಮುಖ ಅವಕಾಶವಾಗಿರುವುದರಿಂದ, ಎಲ್ಲಾ ಇಲಾಖೆಗಳು ಸಮನ್ವಯದಿಂದ ಕಾರ್ಯನಿರ್ವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು. ಫೆ. 27ರಂದು ಬೆಳಿಗ್ಗೆ 10ರಿಂದ ಸಂಜೆ 5 ಗಂಟೆಯವರೆಗೆ ಜಿಲ್ಲಾಡಳಿತ ಭವನದ ಆವರಣದಲ್ಲಿ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ. ಎಚ್.ಕೆ. ಪಾಟೀಲ ಅವರ ಅಧ್ಯಕ್ಷತೆಯಲ್ಲಿ ಜರುಗುವ ಜನತಾ ದರ್ಶನ ಕಾರ್ಯಕ್ರಮದಲ್ಲಿ ಎಲ್ಲ ಇಲಾಖೆಯ ಅಧಿಕಾರಿಗಳು ಸಮಯಕ್ಕೆ ಸರಿಯಾಗಿ ಹಾಜರಾಗಿ ಸಮರ್ಪಕವಾಗಿ ಕಾರ್ಯ ನಿರ್ವಹಿಸಬೇಕೆಂದು ಜಿಲ್ಲಾಧಿಕಾರಿ ಸಿ.ಎನ್. ಶ್ರೀಧರ್ ತಿಳಿಸಿದರು.

ಸಭೆಯಲ್ಲಿ ಜನತಾ ದರ್ಶನ ಕುರಿತು ವಿವಿಧ ಇಲಾಖೆಗಳಿಂದ ಸ್ವೀಕೃತವಾದ ಅರ್ಜಿಗಳ ವಿವರ, ಕೈಗೊಂಡ ಕ್ರಮಗಳ ಕುರಿತು ಚರ್ಚೆ ನಡೆಸಲಾಯಿತು.

ಈ ಸಂದರ್ಭದಲ್ಲಿ ಅಪರ ಜಿಲ್ಲಾಧಿಕಾರಿ ಡಾ. ದುರಗೇಶ್ ಕೆ.ಆರ್, ಜಿ.ಪಂ ಉಪಕಾರ್ಯದರ್ಶಿ ಸಿ.ಆರ್. ಮುಂಡರಗಿ, ಉಪವಿಭಾಗಾಧಿಕಾರಿ ಗಂಗಪ್ಪ ಎಂ, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಬಸನಗೌಡ ಕೋಟೂರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕಿ ಪದ್ಮಾವತಿ ಜಿ, ತಹಸೀಲ್ದಾರರು, ತಾ.ಪಂ ಕಾರ್ಯನಿರ್ವಹಣಾಧಿಕಾರಿಗಳು, ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರು ಸೇರಿದಂತೆ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

> ಅಧಿಕಾರಿಗಳು ತಮ್ಮ ತಮ್ಮ ಇಲಾಖೆಯ ಬಾಕಿ ಅರ್ಜಿಗಳ ವಿವರಗಳನ್ನು ಪೂರ್ವಭಾವಿಯಾಗಿ ಪರಿಶೀಲಿಸಿ, ಸಾಧ್ಯವಾದಷ್ಟು ಸ್ಥಳದಲ್ಲೇ ಪರಿಹಾರ ನೀಡುವ ಮನೋಭಾವದಿಂದ ಕಾರ್ಯನಿರ್ವಹಿಸಬೇಕು. ಅರ್ಜಿಗಳ ವಿಲೇವಾರಿ ಪ್ರಕ್ರಿಯೆ ಪಾರದರ್ಶಕವಾಗಿದ್ದು, ಸಮಯಬದ್ಧವಾಗಿ ಪೂರ್ಣಗೊಳ್ಳಬೇಕು ಎಂದು ಜಿಲ್ಲಾಧಿಕಾರಿಗಳು ಹೇಳಿದರು.

## ಪತ್ರಿಕೋದ್ಯಮಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ: ಕೆ. ವಿ. ಪ್ರಭಾಕರ್



**■ ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ಜಿಲ್ಲೆ ಕಲೆ, ಸಾಹಿತ್ಯ ಹಾಗೂ ಪತ್ರಿಕೋದ್ಯಮ ಕ್ಷೇತ್ರದಲ್ಲಿ ವಿಶಿಷ್ಟ ಗುರುತನ್ನು ಹೊಂದಿದ್ದು, ಪತ್ರಿಕೋಧ್ಯಮಕ್ಕೆ ಜಿಲ್ಲೆಯ ಕೊಡುಗೆ ಅಪಾರವಾಗಿದೆ ಎಂದು ಮುಖ್ಯಮಂತ್ರಿ ಮಾಧ್ಯಮ ಸಲಹೆಗಾರ ಕೆ. ವಿ. ಪ್ರಭಾಕರ್ ಅಭಿಪ್ರಾಯಪಟ್ಟರು.

ನಗರದ ಹಾತಲಗೇರಿ ರಸ್ತೆಯಲ್ಲಿರುವ ರತ್ನಾಕರವಾಣಿ ಕನ್ನಡ ದಿನಪತ್ರಿಕೆ ಕಾರ್ಯಾಲಯಕ್ಕೆ ಗುರುವಾರ ಭೇಟಿ ನೀಡಿ ಮಾತನಾಡಿದ ಅವರು, ಅವ್ವ ದತ್ತಿ ನಿಧಿ ಪ್ರಶಸ್ತಿ ಪ್ರಧಾನ ಕಾರ್ಯಕ್ರಮದ ಅಂಗವಾಗಿ ಗದಗ ನಗರಕ್ಕೆ ಆಗಮಿಸಿರುವುದಾಗಿ ತಿಳಿಸಿದರು. ಗದಗ ಐತಿಹಾಸಿಕ ತಾಣವಾಗಿದ್ದು, ಸಾಹಿತ್ಯ ಮತ್ತು ಸಾಂಸ್ಕೃತಿಕ ಕ್ಷೇತ್ರಗಳಲ್ಲಿ ತನ್ನದೇ ಆದ ಛಾಪು ಮೂಡಿಸಿರುವ ಜಿಲ್ಲೆಯಾಗಿದೆ ಎಂದು ಮೆಚ್ಚುಗೆ ವ್ಯಕ್ತಪಡಿಸಿದರು.

▶▶ 3ನೇ ಪುಟಕ್ಕೆ

> "ಕೆ. ವಿ. ಪ್ರಭಾಕರ್ ಅವರು ಮಾಧ್ಯಮ ಸಲಹೆಗಾರರಾದ ನಂತರ ಸರ್ಕಾರ ಮತ್ತು ಮಾಧ್ಯಮದ ನಡುವೆ ಸಮನ್ವಯ ಹೆಚ್ಚಾಗಿದೆ. ಮಾಧ್ಯಮ ಕ್ಷೇತ್ರಕ್ಕೆ ಅವರದೇ ಆದ ವಿಶೇಷ ಕೊಡುಗೆ ಇದೆ. ರತ್ನಾಕರವಾಣಿ ಕನ್ನಡ ದಿನಪತ್ರಿಕೆ ಕಾರ್ಯಾಲಯಕ್ಕೆ ಆಗಮಿಸಿ ಶುಭ ಹಾರೈಸಿರುವುದು ಸಂತಸ ತಂದಿದೆ."
>
> **– ಜಗದೀಶ್ ಎಸ್. ಪಿ.**
> ಸಂಪಾದಕರು, ರತ್ನಾಕರವಾಣಿ ಕನ್ನಡ ದಿನಪತ್ರಿಕೆ

### ತಾಲೂಕು ಮಟ್ಟದ ಪಂಚ ಗ್ಯಾರಂಟಿ ಯೋಜನೆಗಳ ಮಾಸಿಕ ಸಭೆ

# ಫಲಾನುಭವಿಗಳಿಗೆ ಸಕಾಲದಲ್ಲಿ ಸೌಲಭ್ಯ ವಿತರಿಸಿ

**■ ವಿಜಯಸಾಕ್ಷಿ ಸುದ್ದಿ, ಗದಗ**

ಕರ್ನಾಟಕ ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳ ಪ್ರಗತಿ ಪರಿಶೀಲನಾ ಸಭೆಯು ಗದಗ ತಾಲೂಕು ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಸಮಿತಿಯ ಅಧ್ಯಕ್ಷ ಅಶೋಕ್ ಮಂದಾಲಿ ಅವರ ಅಧ್ಯಕ್ಷತೆಯಲ್ಲಿ ಜರುಗಿತು.

ಸಭೆಯಲ್ಲಿ ಮಾತನಾಡಿದ ಅಶೋಕ್ ಮಂದಾಲಿ, ಗದಗ ತಾಲೂಕಿನ ಗೃಹಲಕ್ಷ್ಮಿ ಯೋಜನೆ ಅಡಿಯಲ್ಲಿ ಅಕ್ಟೋಬರ್‌ನಿಂದ ನವೆಂಬರ್ 2025ರವರೆಗೆ 79605 ಅರ್ಜಿಗಳು ನೋಂದಣಿಯಾಗಿದ್ದು, 79179 ಫಲಾನುಭವಿಗಳಿಗೆ ಒಟ್ಟು 31.66 ಕೋಟಿ ರೂ. ಡಿಬಿಟಿ ಮೂಲಕ ಪಾವತಿಸಲಾಗಿದೆ ಎಂದು ತಿಳಿಸಿದ ಅವರು, ಬಾಕಿ ಇರುವ ಅರ್ಜಿಗಳನ್ನು ಶೀಘ್ರವೇ ಪರಿಶೀಲಿಸಿ ಅರ್ಹರಿಗೆ ಸಕಾಲದಲ್ಲಿ ಹಣ ಬಿಡುಗಡೆ ಮಾಡುವಂತೆ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.




ಯುವನಿಧಿ ಯೋಜನೆಯಡಿಯಲ್ಲಿ ಡಿಸೆಂಬರ್ 2025ರವರೆಗೆ 2,594 ಅಭ್ಯರ್ಥಿಗಳು ನೋಂದಾಯಿಸಿಕೊಂಡಿದ್ದು, 1,081 ಅರ್ಹ ಫಲಾನುಭವಿಗಳಿಗೆ ಡಿಬಿಟಿ ಮೂಲಕ ಹಣ ವರ್ಗಾವಣೆಯಾಗಿದೆ. ಉಳಿದ 1,513 ಅಭ್ಯರ್ಥಿಗಳು ಯೋಜನೆಯ ಷರತ್ತುಗಳ ಪ್ರಕಾರ ಹಂತ ಹಂತವಾಗಿ ಅರ್ಹರಾಗಲಿದ್ದಾರೆ ಎಂದು ವಿವರಿಸಿದರು. ರಾಜ್ಯ ಸರ್ಕಾರದ ಅನ್ನಭಾಗ್ಯ ಯೋಜನೆ ಅಡಿಯಲ್ಲಿ ಗದಗ ಗ್ರಾಮೀಣ ಭಾಗದಲ್ಲಿ ಜನವರಿ 2026ರವರೆಗೆ 1,80,659 ಸದಸ್ಯರಿಗೆ ಒಟ್ಟು 7,405.80 ಕ್ವಿಂಟಲ್ ಅಕ್ಕಿ ಹಂಚಿಕೆ ಮಾಡಲಾಗಿದೆ. ಗದಗ ನಗರ ಭಾಗದಲ್ಲಿ 1,33,542 ಸದಸ್ಯರಿಗೆ 5,240.95 ಕ್ವಿಂಟಲ್ ಅಕ್ಕಿ ವಿತರಣೆ ಮಾಡಲಾಗಿದೆ. ಯಾವುದೇ ಅರ್ಹರು ಸೌಲಭ್ಯದಿಂದ ವಂಚಿತರಾಗದಂತೆ ಎಚ್ಚರಿಕೆ ವಹಿಸಬೇಕು ಎಂದರು.

ಗೃಹಜ್ಯೋತಿ ಯೋಜನೆಗೆ ಸಂಬಂಧಿಸಿದಂತೆ ಗದಗ ಗ್ರಾಮೀಣ ಭಾಗದಲ್ಲಿ 53,122 ಸ್ಥಾವರಗಳು ಅರ್ಹರಾಗಿದ್ದು, 52,951 ಸ್ಥಾವರಗಳು ನೋಂದಣಿಯಾಗಿವೆ. ಉಳಿದ ಅರ್ಹ ಗ್ರಾಹಕರನ್ನೂ ಶೀಘ್ರ ನೋಂದಣಿ ಮಾಡಿಸಿ ಯೋಜನೆಯ ಸದುಪಯೋಗ ಪಡೆಯುವಂತೆ ಕ್ರಮ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದರು. ಸಭೆಯಲ್ಲಿ ಜಿಲ್ಲಾ ಗ್ಯಾರಂಟಿ ಯೋಜನೆ ಅನುಷ್ಠಾನ ಪ್ರಾಧಿಕಾರದ ಸದಸ್ಯರಾದ ಈಶ್ವರ ಹುಣಿಸಿಕಟ್ಟಿ, ಶರೀಫ ಬಿಳೆಎಲಿ, ತಾಲೂಕು ಮಟ್ಟದ ಗ್ಯಾರಂಟಿ ಸಮಿತಿಯ ಸದಸ್ಯರುಗಳಾದ ಸಾವಿತ್ರಿ ಹೂಗಾರ, ಸಂಗು ಕರೆಕಲಮಟ್ಟಿ, ಸಂಗಮೇಶ ಎಂ.ಹಾದಿಮನಿ, ರಮೇಶ್ ಹೊನ್ನಿಕಾಯ್ಕರ, ದೇವರಡ್ಡಿ ಬಿ.ತಿರ್ಲಾಪುರ, ಗಣೇಶ್ ಸಿಂಗ್ ಮಿಟಾಡೆ, ಮಲ್ಲಪ್ಪ ಎಚ್.ಬಾರಕೇರ, ಭಾಷಾ ಮಲ್ಲಸಮುದ್ರ ಹಾಗೂ ಮಲ್ಲಯ್ಯ ಕೊರವನವರ ಉಪಸ್ಥಿತರಿದ್ದರು.

> ಶಕ್ತಿ ಯೋಜನೆ ಪ್ರಗತಿ ಕುರಿತು ವಿವರಿಸಿ, ಗದಗ ಘಟಕದಲ್ಲಿ 11–06–2023ರಿಂದ 24–02–2026ರವರೆಗೆ 2.85 ಕೋಟಿ ಮಹಿಳಾ ಪ್ರಯಾಣಿಕರು ಉಚಿತ ಪ್ರಯಾಣ ಮಾಡಿದ್ದು, 89.23 ಕೋಟಿ ರೂ ಮೌಲ್ಯದ ಉಚಿತ ಟಿಕೆಟ್ ವಿತರಿಸಲಾಗಿದೆ. ಬೆಟಗೇರಿ ಘಟಕದಲ್ಲಿ 1.33 ಕೋಟಿ ಮಹಿಳೆಯರು ಉಚಿತ ಪ್ರಯಾಣ ಮಾಡಿದ್ದು, 92.63 ಕೋಟಿ ರೂ ಮೌಲ್ಯದ ಟಿಕೆಟ್ ವಿತರಣೆಯಾಗಿದೆ ಎಂದು ಅಶೋಖ್ ಮಂದಾಲಿ ತಿಳಿಸಿದರು.

# ಶ್ರೀ ಗುರು ರಾಘವೇಂದ್ರ ರಾಯರ ವರ್ಧಂತಿ ಉತ್ಸವಕ್ಕೆ ಸಕಲ ಸಿದ್ಧತೆ



■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ಪಟ್ಟಣದಲ್ಲಿ ಮಾರ್ಚ್ 1, 2026 ರ ಭಾನುವಾರದಂದು ಶ್ರೀ ಗುರು ರಾಘವೇಂದ್ರ ಸ್ವಾಮಿ ಅವರ ವರ್ಧಂತಿ ಉತ್ಸವವನ್ನು ಭಕ್ತಿಭಾವದಿಂದ ಆಚರಿಸಲು ಸಕಲ ಸಿದ್ಧತೆಗಳು ಪೂರ್ಣಗೊಂಡಿವೆ.

ನೀರಾವರಿ ಇಲಾಖೆಯ ಆವರಣದಲ್ಲಿರುವ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನದಲ್ಲಿ ಬೆಳಿಗ್ಗೆ 5.00 ಗಂಟೆಯಿಂದ ವಿಶೇಷ ಪೂಜೆ, ಅಭಿಷೇಕ ಹಾಗೂ ಭಜನಾ ಮಿತ್ರರಿಂದ ಭಕ್ತಿ ಗೀತೆಗಳ ಕಾರ್ಯಕ್ರಮ ನಡೆಯಲಿದೆ.

ಮಧ್ಯಾಹ್ನ 12.00 ಗಂಟೆಗೆ ರಾಯರ ಮಹಾ ಪ್ರಸಾದ ವ್ಯವಸ್ಥೆ ಮಾಡಲಾಗಿದೆ ಎಂದು ಆಯೋಜಕರು ತಿಳಿಸಿದ್ದಾರೆ.

ಸಂಜೆ 5.00 ಗಂಟೆಗೆ "ಬೆಳದಿಂಗಳ ಸ್ವರ ಸಂಭ್ರಮ-2" ವಿಶೇಷ ಸಂಗೀತ ಕಾರ್ಯಕ್ರಮ ಜರುಗಲಿದ್ದು, ಗವಾಯಿಗಳು ಹಾಗೂ ಸ್ಥಳೀಯ ಆಯ್ದ ಗಾಯಕರಿಂದ ಭಕ್ತಿರಸದ ಗಾನ ಸಂಭ್ರಮ ಏರ್ಪಡಿಸಲಾಗಿದೆ. ರಾತ್ರಿ 8.00 ಗಂಟೆಗೆ ಮಹಾ ಪ್ರಸಾದ ವಿತರಣೆ ನಡೆಯಲಿದೆ.

ಭಕ್ತ ಮಂಡಳಿ, ನೀರಾವರಿ ಶ್ರೀ ಆಂಜನೇಯ ಸ್ವಾಮಿ ದೇವಸ್ಥಾನ ಭಜನಾ ಸೇವಾ ಸಮಿತಿ, ಡಾ. ಪಂಡಿತ್ ಪುಟ್ಟರಾಜ ಕವಿ ಗವಾಯಿಗಳ ಸೇವಾ ಸಮಿತಿ ಹಾಗೂ ನವೀನ್ ಸ್ಪೋರ್ಟ್ಸ್ ಕ್ಲಬ್ ಸಂಯುಕ್ತ ಆಶ್ರಯದಲ್ಲಿ ಕಾರ್ಯಕ್ರಮ ಆಯೋಜಿಸಲಾಗಿದೆ.

ಸರ್ವ ಭಕ್ತರು ಸಮಯಕ್ಕೆ ಸರಿಯಾಗಿ ಆಗಮಿಸಿ ಶ್ರೀ ರಾಯರ ಅನುಗ್ರಹ ಹಾಗೂ ಆಶೀರ್ವಾದ ಪಡೆಯುವಂತೆ ಸಮಿತಿಯವರು ಮನವಿ ಮಾಡಿದ್ದಾರೆ.

### ಆಶ್ರಯ ಕಾಲೋನಿಯಲ್ಲಿ ನಾಳೆ ಕಾರ್ಯಕ್ರಮ ಆಯೋಜನೆ

# ಸೇವಾಲಾಲ್ ಮಹಾರಾಜರ 287ನೇ ಜಯಂತಿ

■ **ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಪಟ್ಟಣದ ಬಂಜಾರ (ಲಂಬಾಣಿ) ಸಮಾಜದ ವತಿಯಿಂದ 3ನೇ ವಾರ್ಡ್ ಜಕ್ಕಲಿ ರಸ್ತೆಯ ಆಶ್ರಯ ಕಾಲೋನಿಯಲ್ಲಿ ಸಂತ ಶ್ರೀ ಸೇವಾಲಾಲ್ ಮಾಹಾರಾಜರ 287ನೇ ಜಯಂತಿಯನ್ನು ಫೆ. 28ರಂದು ಬೆಳಿಗ್ಗೆ 11 ಗಂಟೆಗೆ ಹಮ್ಮಿಕೊಳ್ಳಲಾಗಿದೆ.

ಕಾರ್ಯಕ್ರಮದ ಸಾನ್ನಿಧ್ಯವನ್ನು ನರೇಗಲ್ ಹಿರೇಮಠದ ಶ್ರೀ ಮಲ್ಲಿಕಾರ್ಜುನ ಶಿವಾಚಾರ್ಯ ಮಹಾಸ್ವಾಮಿಗಳು ಹಾಗೂ ಕೊಪ್ಪಳ ಬಹದ್ದೂರಬಂಡಾ ಬಂಜಾರ ಪೀಠದ ಶ್ರೀ ಗುರು ಗೋಸಾಯಿಬಾವ ಮಹಾಸ್ವಾಮಿಗಳು ವಹಿಸಲಿದ್ದಾರೆ. ಕಾರ್ಯಕ್ರಮವನ್ನು ರಾಜ್ಯ ಖನಿಜ ಅಭಿವೃದ್ಧಿ ನಿಗಮ ನಿಯಮಿತದ ಅಧ್ಯಕ್ಷರು ಹಾಗೂ ರೋಣ ಶಾಸಕರಾದ ಜಿ.ಎಸ್. ಪಾಟೀಲ ಉದ್ಘಾಟಿಸಲಿದ್ದಾರೆ.

ನರೇಗಲ್ ಬಂಜಾರ ಸಮಾಜದ ಹಿರಿಯರಾದ ದೇವಕ್ಕ ಎಸ್. ರಾಠೋಡ ಘನ ಉಪಸ್ಥಿತಿ ವಹಿಸಲಿದ್ದಾರೆ. ಮುಖ್ಯ ಅತಿಥಿಗಳಾಗಿ ನರೇಗಲ್ ಶಹರ ಕಾಂಗ್ರೆಸ್ ಘಟಕದ ಅಧ್ಯಕ್ಷ ಶಿವನಗೌಡ ಎ.ಪಾಟೀಲ, ನರೇಗಲ್ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಶರಣಪ್ಪ ಬೆಟಗೇರಿ, ನರೇಗಲ್‌ನ ಹಿರಿಯ ವೈದ್ಯರಾದ ಡಾ. ಜಿ.ಕೆ. ಕಾಳೆ, ಡಾ. ಕೆ.ಬಿ. ಧನ್ನೂರ, ಮುಖಂಡರಾದ ನಿಂಗನಗೌಡ ಲಕ್ಕನಗೌಡ್ರ, ವೀರನಗೌಡ ಪಾಟೀಲ, ಅಲ್ಲಾಭಕ್ಷಿ ಪಿ.ನದಾಫ್, ಜೈಭೀಮ ಸೇನಾ ರಾಜ್ಯ ಸಂಘರ್ಷ ಸಮಿತಿ ಉಪಾಧ್ಯಕ್ಷ ಮೈಲಾರಪ್ಪ ವೀ.ಚಳ್ಳಮರದ, ಸಂತೋಷ ಹನಮಸಾಗರ, ಕರವೇ ಗದಗ ಜಿಲ್ಲಾಧ್ಯಕ್ಷ ಹನಮಂತಪ್ಪ ಎಚ್.ಅಬ್ಬಿಗೇರಿ, ಕಳಕನಗೌಡ ಪೊಲೀಸ್‌ಪಾಟೀಲ, ಬಿ.ಇ.ಡಬ್ಲೂ ಇಂಡಸ್ಟ್ರೀಸ್‌ನ ಉದ್ಯಮಿ ಬಸವರಾಜ ವಂಕಲಕುಂಟಿ, ವೈದ್ಯ ಡಾ.



ನಾಗರಾಜ ಎಲ್.ಗ್ರಾಮಪುರೋಹಿತ, ಮಲ್ಲಿಕಾರ್ಜುನಗೌಡ ಭೂಮನಗೌಡ್ರ, ಯಲ್ಲಪ್ಪ ಮಣ್ಣೊಡ್ಡರ, ಕುಮಾರಸ್ವಾಮಿ ಕೋರಧಾನ್ಯಮಠ, ಮಾರುತೇಶ್ವರ ಟ್ರಸ್ಟ್ ಕಮಿಟಿ ಅಧ್ಯಕ್ಷ ದಾದಾಸಾಬ್ ನದಾಫ್, ಗುಡದಪ್ಪ ಗೋಡಿ, ಸದ್ದಾಂ ನಶೇಖಾನ್ ಪಾಲ್ಗೊಳ್ಳಲಿದ್ದಾರೆ.

ವಿಶೇಷ ಆಹ್ವಾನಿತರಾಗಿ ನರೇಗಲ್ ಪೊಲೀಸ್ ಠಾಣೆಯ ಪಿ.ಎಸ್.ಐ ಐಶ್ವರ್ಯ ನಾಗರಾಳ

> ರೋಣ ತಾಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷರಾದ ಮಿಥುನ್ ಜಿ.ಪಾಟೀಲ ಅಧ್ಯಕ್ಷತೆ ವಹಿಸಲಿದ್ದಾರೆ.
>
> ರಾಜ್ಯ ಯುವ ಕಾಂಗ್ರೆಸ್ ಘಟಕದ ಪ್ರಧಾನ ಕಾರ್ಯದರ್ಶಿ ಅಕ್ಷಯ ಐ.ಪಾಟೀಲ ಸಂತ ಶ್ರೀ ಸೇವಾಲಾಲ್ ಮಾಹಾರಾಜರ ಹಾಗೂ ಡಾ. ಬಿ.ಆರ್. ಅಂಬೇಡ್ಕರ್ ಅವರ ಭಾವಚಿತ್ರಕ್ಕೆ ಪುಷ್ಪಾರ್ಚನೆ ಮಾಡಲಿದ್ದಾರೆ. ನಿವೃತ್ತ ಶಿಕ್ಷಕ ಹಾಗೂ ಗಜೇಂದ್ರಗಡ ಬಂಜಾರ ಸಮಾಜದ ಹಿರಿಯರಾದ ತಾರಾಸಿಂಗ್ ರಾಠೋಡ ಹಾಗೂ ಕರ್ನಾಟಕ ಗೋರ ಸೇನಾ ರಾಜ್ಯಾಧ್ಯಕ್ಷರಾದ ರವಿಕಾಂತ ಅಂಗಡಿ ವಿಶ್ವ ಶಾಂತಿಗಾಗಿ ಭೋಗ್ ಸಮರ್ಪಣೆ ಕಾರ್ಯಕ್ರಮಕ್ಕೆ ಚಾಲನೆ ನೀಡಲಿದ್ದಾರೆ.

ಹಾಗೂ ನರೇಗಲ್ ಪಟ್ಟಣ ಪಂಚಾಯಿತಿಯ ಮುಖ್ಯಾಧಿಕಾರಿ ಮಲ್ಲೇಶ ಪಚ್ಚಿ ಪಾಲ್ಗೊಳ್ಳಲಿದ್ದಾರೆ. ನರೇಗಲ್‌ನಲ್ಲಿ ವಿವಿಧ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಬಂಜಾರ ಸಮಾಜದವರಾದ ಗುತ್ತಿಗೆದಾರ ಲುಂಬಪ್ಪ ಸೋಮಲಪ್ಪ ಲಮಾಣಿ, ಶಿಕ್ಷಕರಾದ ಲಕ್ಷ್ಮಣ ನಾಯಕ, ಶಿಕ್ಷಕಿಯರಾದ ಎ.ಎಂ. ರಾಠೋಡ, ವಿಜಯಲಕ್ಷ್ಮೀ ಜಾಧವ, ಎನ್.ಎಲ್. ಚವ್ಹಾಣ, ಉಪನ್ಯಾಸಕರಾದ ಡಾ. ಡಿ.ಎಲ್. ಪವಾರ, ಸಂದೀಪಕುಮಾರ ರಾಠೋಡ, ಋಷಿಕೇಶ ಪವಾರ, ಡಾ. ಶ್ರೀನಿವಾಸ ಬೇವಿನಕಟ್ಟಿ, ಪೊಲೀಸ್ ಇಲಾಖೆಯ ವಸಂತ ರಾಠೋಡ, ಹೆಸ್ಕಾಂ ಇಲಾಖೆಯ ಪ್ರದೀಪ ರಾಠೋಡ, ಕೆವಿಜಿ ಬ್ಯಾಂಕ್ ಉದ್ಯೋಗಿ ಕೃಷ್ಣಾ ನರಸಾಪೂರ ಭಾಗವಹಿಸಲಿದ್ದಾರೆ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಹೋಳಿ ಹುಣ್ಣಿಮೆ ಶಾಂತಿ ಸಭೆ

■ **ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ**

ಮಾರ್ಚ್ 3ರಂದು ಆಚರಿಸಲಾಗುವ ಹೋಳಿ ಹುಣ್ಣಿಮೆ ಅಂಗವಾಗಿ ರಂಗ ಪಂಚಮಿ ಹೋಳಿಯಾಟವನ್ನು ಶಾಂತಿಯುತವಾಗಿ ಆಚರಿಸಬೇಕೆಂದು ಅಭಿವೃದ್ಧಿ ಅಧಿಕಾರಿ ಅಮೀರನಾಯಕ ವಿನಂತಿಸಿದರು.

ಈ ಕುರಿತು ಗುರುವಾರ ಗ್ರಾಮ ಪಂಚಾಯಿತಿಯಲ್ಲಿ ಆಯೋಜಿಸಿದ್ದ ಗ್ರಾಮಸ್ಥರ ಶಾಂತಿ ಸಭೆಯಲ್ಲಿ ಮಾತನಾಡಿದ ಅವರು, ಮಾರ್ಚ್ 2ರಂದು ಕಾಮ ರತಿಯನ್ನು ಪ್ರತಿಷ್ಠಾಸಬೇಕು. 3ರಂದು ಹೋಳಿಯಾಟ, ಕಾಮದಹನದೊಂದಿಗೆ ಹೋಳಿ ಹಬ್ಬವನ್ನು ಆಚರಿಸುವ ಕುರಿತು ಗ್ರಾಮದ ಗಣ್ಯರ ಸಲಹೆಯಂತೆ ನಿರ್ಧರಿಸಲಾಗಿದೆ.

ವಿದ್ಯಾರ್ಥಿಗಳ ಪರೀಕ್ಷಾ ಸಮಯವಿರುವುದರಿಂದ ಡಿ.ಜೆ, ಜೋರಾಗಿ ಹಲಗೆ ಬಾರಿಸುವುದು ಹಾಗೂ ಟ್ರ್ಯಾಕ್ಟರ್‌ಗಳಲ್ಲಿ ಜೋರಾಗಿ ಧ್ವನಿವರ್ಧಕ ಬಳಕೆಯನ್ನು ನಿಷೇಧಿಸಲಾಗಿದೆ.

ಕಾನೂನು ಉಲ್ಲಂಘನೆ ಮಾಡಿದರೆ ದಂಡ ವಿಧಿಸಲಾಗುವುದು. ಈ ಕುರಿತು ಗ್ರಾಮ ಪಂಚಾಯಿತಿಯು ಧ್ವನಿವರ್ಧಕದ ಮೂಲಕ ಪ್ರಕಟಣೆ ಹೊರಡಿಸುತ್ತದೆ ಎಂದು ಹೇಳಿದರು. ಸೇರಿದ ಗ್ರಾಮಸ್ಥರು ತಮ್ಮ ಅಭಿಪ್ರಾಯ ಮತ್ತು ಸಲಹೆಗಳನ್ನು ನೀಡಿದರು.



ಲಕ್ಷ್ಮೇಶ್ವರದ ಶಿಕ್ಷಕಿ, ಸಾಹಿತಿ ಮೈತ್ರಾದೇವಿ ಆರ್.ಹಿರೇಮಠ ಅವರ 'ಆಗಂತುಕದತ್ತ ಮುಖಮಾಡಿ' ಮತ್ತು 'ವಚನಾಮೃತ' ಎಂಬ 2 ಕೃತಿಗಳು ಇತ್ತೀಚೆಗೆ ಯಳವತ್ತಿಯಲ್ಲಿ ನಡೆದ 2ನೇ ತಾಲೂಕು ಕನ್ನಡ ಸಾಹಿತ್ಯ ಸಮ್ಮೇಳನದಲ್ಲಿ ಬಿಡುಗಡೆಗೊಂಡಿತು. ಶಿರಹಟ್ಟಿಯ ಶ್ರೀ ಫಕ್ಕಿರೇಶ್ವರ ಸಂಸ್ಥಾನ ಮಠದ ಶ್ರೀ ಫಕೀರ ದಿಂಗಾಲೇಶ್ವರ ಜಗದ್ಗುರುಗಳ ಸಾನ್ನಿಧ್ಯದಲ್ಲಿ ಸಮ್ಮೇಳನದ ಸರ್ವಾಧ್ಯಕ್ಷರಾದ ಲಲಿತಮ್ಮ ಕೆರಿಮನಿ ಅವರು ಬಿಡುಗಡೆಗೊಳಿಸಿದರು.

# ರಾಜ್ಯ ಬಂಜಾರ ನಿರಾಶ್ರಿತರ ಸಂಘದ ವಿಜಯನಗರ ಜಿಲ್ಲಾಧ್ಯಕ್ಷರಾಗಿ ಕೆ. ರವಿನಾಯ್ಕ ನೇಮಕ

■ **ವಿಜಯಸಾಕ್ಷಿ ಸುದ್ದಿ, ಹಗರಿಬೊಮ್ಮನಹಳ್ಳಿ**

ರಾಜ್ಯ ಬಂಜಾರ (ಲಂಬಾಣಿ) ನಿರಾಶ್ರಿತರ ಸಂಘದ ವಿಜಯನಗರ ಜಿಲ್ಲಾಧ್ಯಕ್ಷರಾಗಿ ತಾಲೂಕಿನ ಕೋಗಳಿ ತಾಂಡಾ ಗ್ರಾಮದ ಹೋರಾಟಗಾರ ಕೆ. ರವಿನಾಯ್ಕ ಅವರನ್ನು ನೇಮಕ ಮಾಡಲಾಗಿದೆ.

ಈ ಕುರಿತು ಸಂಘದ ರಾಜ್ಯಾಧ್ಯಕ್ಷರು ಅಧಿಕೃತ ಆದೇಶ ಹೊರಡಿಸಿದ್ದು, ಸಂಘದ ಧ್ಯೇಯೋದ್ದೇಶಗಳು ಹಾಗೂ ಬೈಲಾ ನಿಯಮಾವಳಿಗಳ ಅನುಸಾರವಾಗಿ ಸಂಘಟನೆಯನ್ನು ಬಲಪಡಿಸುವುದು,



ನಿರಾಶ್ರಿತ ಬಂಜಾರ ಸಮುದಾಯದ ಸಮಸ್ಯೆಗಳ ಪರಿಹಾರಕ್ಕಾಗಿ ಶ್ರಮಿಸುವುದು ಮತ್ತು ಸಂಘದ ಆಶೋತ್ತರಗಳನ್ನು ಈಡೇರಿಸುವ ದಿಸೆಯಲ್ಲಿ ಕಾರ್ಯನಿರ್ವಹಿಸುವಂತೆ ಸೂಚಿಸಲಾಗಿದೆ. ಕೆ. ರವಿನಾಯ್ಕ ಅವರು ಹಲವು ವರ್ಷಗಳಿಂದ ಬಂಜಾರ ಸಮುದಾಯದ ಹಕ್ಕುಗಳಿಗಾಗಿ ಹೋರಾಟ ನಡೆಸುತ್ತಿದ್ದು, ಅವರ ನೇಮಕಾತಿಯಿಂದ ವಿಜಯನಗರ ಜಿಲ್ಲೆಯಲ್ಲಿ ಸಂಘಟನೆಗೆ ಮತ್ತಷ್ಟು ಬಲ ಸಿಗಲಿದೆ ಎಂಬ ವಿಶ್ವಾಸ ವ್ಯಕ್ತವಾಗಿದೆ.

ಹಗರಿಬೊಮ್ಮನಹಳ್ಳಿ ಬಂಜಾರ ಸಮಾಜದ ಗುರುಹಿರಿಯರು ಹಾಗೂ ಮುಖಂಡರು ಕೆ. ರವಿನಾಯ್ಕ ಅವರನ್ನು ಅಭಿನಂದಿಸಿ, ಅವರ ಹೊಸ ಹುದ್ದೆಗೆ ಶುಭಾಶಯಗಳನ್ನು ಕೋರಿದ್ದಾರೆ.

# ಸಮುದಾಯ ಭವನಗಳಿಗೆ ಜಾಗ ಲೀಸ್: ಆಕ್ಷೇಪಣೆ ಸಲ್ಲಿಕೆಗೆ 30 ದಿನಗಳ ಗಡುವು

■ **ವಿಜಯಸಾಕ್ಷಿ ಸುದ್ದಿ, ಗದಗ**

ಜಿಲ್ಲೆಯ ಮುಂಡರಗಿ ಪುರಸಭೆ ವ್ಯಾಪ್ತಿಯಲ್ಲಿ ವಿವಿಧ ಸಂಘಟನೆಗಳಿಗೆ ಸಮುದಾಯ ಹಾಗೂ ಸಾರ್ವಜನಿಕ ಉಪಯೋಗದ ಕಟ್ಟಡ ನಿರ್ಮಾಣಕ್ಕಾಗಿ ಜಾಗವನ್ನು 30 ವರ್ಷಗಳ ಲೀಸ್ ಆಧಾರದ ಮೇಲೆ ನೀಡಲು ನಿರ್ಧಾರ ಕೈಗೊಳ್ಳಲಾಗಿದೆ.

ಫೆಬ್ರವರಿ 5 ರಂದು ನಡೆದ ಆಡಳಿತಾಧಿಕಾರಿಗಳ ಸಭೆಯ ಠರಾವು ಸಂಖ್ಯೆ 176 ರನ್ವಯ ಕೆಳಕಂಡ ಸಂಘಟನೆಗಳ ಅರ್ಜಿಗಳನ್ನು ಪರಿಗಣಿಸಿ ಲೀಸ್ ಮಂಜೂರು ಮಾಡಲು ತೀರ್ಮಾನಿಸಲಾಗಿದೆ.

ಕರ್ನಾಟಕ ರಾಜ್ಯ ಹಿರಿಯ ನಾಗರಿಕ ಹಾಗೂ ನಿವೃತ್ತ ನೌಕರರ ಕ್ಷೇಮಾಭಿವೃದ್ಧಿ ಸಂಘ, ಹುಬ್ಬಳ್ಳಿ – ತಾಲೂಕು ಘಟಕ, ಮುಂಡರಗಿ ರಿ.ಸ.ನಂ 220/5+6ಎ+6ಬಿ, ಸಿ.ಎ. ಸೈಟ್ ಟಿ.ಎಂ.ಸಿ ನಂ 1771/ಕ್ಯೂ/23, ವಿಸ್ತೀರ್ಣ 480.97 ಚ.ಮೀ – ಸಮುದಾಯ ಭವನ ನಿರ್ಮಾಣಕ್ಕಾಗಿ, ಕರ್ನಾಟಕ ರಾಜ್ಯ ದಲಿತ ಸಂಘರ್ಷ ಸಮಿತಿ, ಬೆಂಗಳೂರು – ತಾಲೂಕು ಶಾಖೆ, ಮುಂಡರಗಿ ರಿ.ಸ.ನಂ 119/1C+ 1ಬ+2+3+4C+4ಬ/1, ಸಿ.ಎ. ಸೈಟ್ ಟಿ.ಎಂ.ಸಿ ನಂ 900/ವಿ/34, ವಿಸ್ತೀರ್ಣ 921 ಚ.ಮೀ – ದಲಿತ ಸಮಾಜದ ಕಾರ್ಯಚಟುವಟಿಕೆಗಳಿಗಾಗಿ ಕಟ್ಟಡ ನಿರ್ಮಾಣಕ್ಕೆ, ಇಂಡಿಯನ್ ಮೆಡಿಕಲ್ ಅಸೋಸಿಯೇಶನ್, ಮುಂಡರಗಿ ಬ್ರಾಂಚ್ ರಿ.ಸ.ನಂ 29/2, ಸಿ.ಎ. ಸೈಟ್ ಟಿ.ಎಂ.ಸಿ ನಂ 5641, ಪ್ಲಾಟ್ ನಂ 81 – ಆರೋಗ್ಯ ತಪಾಸಣೆ, ರಕ್ತದಾನ ಶಿಬಿರ ಹಾಗೂ ವೈದ್ಯಕೀಯ ಚಟುವಟಿಕೆಗಳಿಗಾಗಿ ಕಟ್ಟಡ ನಿರ್ಮಾಣಕ್ಕೆ. ಈ ಕುರಿತು ಯಾರಿಗಾದರೂ ತಕರಾರು ಅಥವಾ ಆಕ್ಷೇಪಣೆಗಳಿದ್ದಲ್ಲಿ, ಪ್ರಕಟಣೆಯ ದಿನಾಂಕದಿಂದ 30 ದಿನಗಳೊಳಗಾಗಿ ಸೂಕ್ತ ದಾಖಲೆಗಳೊಂದಿಗೆ ಲಿಖಿತವಾಗಿ ತಮ್ಮ ಆಕ್ಷೇಪಣೆ ಅರ್ಜಿಯನ್ನು ಮುಂಡರಗಿ ಪುರಸಭೆ ಕಾರ್ಯಾಲಯಕ್ಕೆ ಸಲ್ಲಿಸಲು ಸೂಚಿಸಲಾಗಿದೆ.

ನಿಗದಿತ ಅವಧಿ ಮೀರಿದ ನಂತರ ಸಲ್ಲಿಸಲಾದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ. ಯಾವುದೇ ಆಕ್ಷೇಪಣೆಗಳು ಬಾರದಿದ್ದಲ್ಲಿ, ನಿಯಮಾನುಸಾರ ಮುಂದಿನ ಕ್ರಮ ಕೈಗೊಳ್ಳಲಾಗುವುದು ಎಂದು ಮುಂಡರಗಿ ಪುರಸಭೆ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

### ಪಿಎನ್‌ಬಿ 'ರಕ್ಷಕ್ ಪ್ಲಸ್' ಯೋಜನೆ

# ವೀರಯೋಧನ ಕುಟುಂಬಕ್ಕೆ 1 ಕೋಟಿ ನೆರವು



■ **ವಿಜಯಸಾಕ್ಷಿ ಸುದ್ದಿ, ಗದಗ**

ಪಂಜಾಬ್ ನ್ಯಾಷನಲ್ ಬ್ಯಾಂಕ್ (ಪಿಎನ್‌ಬಿ) ತನ್ನ 'ರಕ್ಷಕ್ ಪ್ಲಸ್' ಯೋಜನೆಯಡಿ ವೀರಮರಣ ಹೊಂದಿದ ಯೋಧ ಮಂಜುನಾಥ ಗಿಡ್ಡಮಲ್ಲಣ್ಣ ಅವರ ಕುಟುಂಬಕ್ಕೆ 1 ಕೋಟಿ ಪರಿಹಾರ ಧನ ವಿತರಿಸಿದೆ. ಹುಬ್ಬಳ್ಳಿ ವೃತ್ತಾಧಿಕಾರಿ ಸೂರ್ಯಮಣಿ ಸಾಹು ಅವರು ಚೆಕ್ ಹಸ್ತಾಂತರಿಸಿದರು.

> 1895ರಲ್ಲಿ ಪಾಕಿಸ್ತಾನದ ಲಾಹೋರ್‌ನಲ್ಲಿ ಸ್ಥಾಪಿತವಾದ ಪಿಎನ್‌ಬಿ ದೇಶದ ಮೊದಲ ಸ್ವದೇಶಿ ಬ್ಯಾಂಕ್‌ಗಳಲ್ಲಿ ಒಂದಾಗಿದೆ. ಸಮಾಜಮುಖಿ ಚಿಂತನೆಗಳೊಂದಿಗೆ ಬೆಳೆಯುತ್ತಿರುವ ಬ್ಯಾಂಕ್, ವಿವಿಧ ವಲಯಗಳಿಗೆ ಅನೇಕ ಯೋಜನೆಗಳನ್ನು ಜಾರಿಗೆ ತಂದಿದೆ. ಸ್ಯಾಲರಿ, ವೈದ್ಯರು, ಕಾರ್ಮಿಕರು, ರೈತರು, ಮಹಿಳೆಯರು ಹಾಗೂ ಹಿರಿಯ ನಾಗರಿಕರಿಗಾಗಿ ವಿಶೇಷ ಸೌಲಭ್ಯಗಳನ್ನು ಒದಗಿಸುತ್ತಿದೆ.
>
> **–ಸೂರ್ಯಮಣಿ ಸಾಹು,** ಹುಬ್ಬಳ್ಳಿ ವೃತ್ತಾಧಿಕಾರಿ.


ಭಾರತೀಯ ಸೇನೆಯಲ್ಲಿ ಸೇವೆ ಸಲ್ಲಿಸುತ್ತಿದ್ದ ಮಂಜುನಾಥ ಅವರು ಸೇವಾ ಅವಧಿಯಲ್ಲಿ ವಿದ್ಯುತ್ ಸ್ಪರ್ಶದಿಂದ ವೀರಮರಣ ಹೊಂದಿದ್ದರು. ಅವರು ಪಿಎನ್‌ಬಿಯಲ್ಲಿ ಉಳಿತಾಯ ಖಾತೆ ಹೊಂದಿದ್ದ ಹಿನ್ನೆಲೆ, ಬ್ಯಾಂಕ್‌ನ ವಿಶೇಷ ಭದ್ರತಾ ಯೋಜನೆಯಡಿ ಈ ನೆರವು ಕುಟುಂಬಕ್ಕೆ ದೊರಕಿತು.

ಈ ವೇಳೆ ಮಾತನಾಡಿದ ಸೂರ್ಯಮಣಿ ಸಾಹು, "ದೇಶಕ್ಕಾಗಿ ಸೇವೆ ಸಲ್ಲಿಸಿದ ಯೋಧನ ಅಗಲಿಕೆ ಅತ್ಯಂತ ದುಃಖದ ಸಂಗತಿ. ಅವರ ಕುಟುಂಬಕ್ಕೆ ದುಃಖ ಭರಿಸುವ ಶಕ್ತಿಯನ್ನು ಭಗವಂತ ನೀಡಲಿ. ಪಿಎನ್‌ಬಿ ಸದಾ ಸಮಾಜಮುಖಿ ಕಾರ್ಯಗಳಲ್ಲಿ ಮುಂಚೂಣಿಯಲ್ಲಿದ್ದು, ಯೋಧರ ಕುಟುಂಬದೊಂದಿಗೆ ನಿಲ್ಲುವುದು ನಮ್ಮ ಕರ್ತವ್ಯ," ಎಂದರು. ರಾಜ್ಯದಲ್ಲಿ ಮುಂದಿನ ದಿನಗಳಲ್ಲಿ 40 ರಿಂದ 45 ಹೊಸ ಶಾಖೆಗಳನ್ನು ಆರಂಭಿಸುವ ಉದ್ದೇಶ ಹೊಂದಿರುವುದಾಗಿ ಬ್ಯಾಂಕ್ ವಕ್ತಾರರು ತಿಳಿಸಿದರು.

ಕಾರ್ಯಕ್ರಮದಲ್ಲಿ ಯೋಧನ ತಂದೆ-ತಾಯಿ, ಪತ್ನಿ ಹಾಗೂ ಮಗು ಉಪಸ್ಥಿತರಿದ್ದರು. ಜೊತೆ-ಗೆ ಗುರುರಾಜ್ ಬಳಗಾನೂರ, ಸಿನಿಯರ್ ಮ್ಯಾನೇಜರ್ ಶಿವಕುಮಾರ ಕೆ., ಮ್ಯಾನೇಜರ್ ಡಿ.ಎಚ್. ಅಸ್ಲಂಭಾಷಾ, ಆರ್‌ಜೆ ಮೀಡಿಯಾ ಸಮೂಹ ಸಂಸ್ಥೆ ಮುಖ್ಯಸ್ಥ ಡಾ. ರವೀಂದ್ರ ಜಲರಡ್ಡಿ, ದಿಲಾವಾರ್, ದೇವರಾಜ್, ರಮೇಶ್ ಅನಂತಪುರ, ಅಕ್ಷತಾ ಮತ್ತು ವಿಜಯಲಕ್ಷ್ಮೀ ಸೇರಿದಂತೆ ಹಲವರು ಭಾಗವಹಿಸಿದ್ದರು.

### 2026ನೇ ಸಾಲಿನ ಸಾಮ್ರಾಟ್ ಅಶೋಕ್ ರಾಷ್ಟ್ರೀಯ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ : ಡಾ. ಪುಷ್ಪಲತಾ

# ಸಾಧಿಸುವ ಛಲ ಇದ್ದರೆ ಯಶಸ್ಸು ಕಟ್ಟಿಟ್ಟ ಬುತ್ತಿ





> ಕಾರ್ಯಕ್ರಮದ ನೇತೃತ್ವ ವಹಿಸಿ ಮಾತನಾಡಿದ ನಮ್ಮೂರ ಶಾಸಕರು ರಾಷ್ಟ್ರೀಯ ಪತ್ರಿಕೆಯ ಸಂಪಾದಕರಾದ ಡಾ. ಜಲಾಲುದ್ದೀನ್ ಅಕ್ಬರ್, "ನಾನು ಎನ್ನುವುದು ಅಧರ್ಮ, ನಾವು ಎನ್ನುವುದು ಧರ್ಮ. ಪತ್ರಕರ್ತನು ಧ್ವನಿ ಇಲ್ಲದವರ ಧ್ವನಿಯಾಗಬೇಕು. ಸತ್ಯವನ್ನು ನಿಸ್ಸಂಶಯವಾಗಿ ಬರೆಯುವ ಧೈರ್ಯವೇ ನಿಜವಾದ ಪತ್ರಕರ್ತನ ಲಕ್ಷಣ," ಎಂದು ಹೇಳಿದರು.
>
> "ಕನ್ನಡ ಪತ್ರಿಕೆಗಳ ಕತ್ತು ಇಡೀ ವಿಶ್ವಕ್ಕೆ ಗೊತ್ತು. ನಾವು ಯಾರಿಗೂ ಹೆದರಿಸುವುದಿಲ್ಲ, ಯಾರಿಗೂ ಹೆದರುವುದಿಲ್ಲ. ಇದ್ದದ್ದನ್ನು ಇದ್ದಂತೆ ಬರೆಯುವ ಹಕ್ಕು ಸಂವಿಧಾನ ನಮಗೆ ನೀಡಿದೆ," ಎಂದು ಅವರು ಹೇಳಿದರು.

■ **ವಿಜಯಸಾಕ್ಷಿ ಸುದ್ದಿ, ಬೆಂಗಳೂರು**

ಸಾಧನೆ ಸಾಧಕರ ಸ್ವತ್ತು, ಸೋಮಾರಿಗಳ ಸ್ವತ್ತಲ್ಲ. ಸಾಧಿಸುವ ಛಲ, ಸತತ ಪರಿಶ್ರಮ ಮತ್ತು ಏಕಾಗ್ರತೆ ಇದ್ದರೆ ಯಶಸ್ಸು ಕಟ್ಟಿಟ್ಟ ಬುತ್ತಿಯೇ ಸರಿ ಎಂದು ದಾವಣಗೆರೆಯ ಕರ್ನಾಟಕ ಮಹಿಳಾ ಮತ್ತು ಮಕ್ಕಳ ಸಾಧನ ಅಭಿವೃದ್ಧಿ ಚಾರಿಟಬಲ್ ಟ್ರಸ್ಟ್ ಅಧ್ಯಕ್ಷೆ ಡಾ. ಪುಷ್ಪಲತಾ ಹೇಳಿದರು.

ನಗರದ ಡಾ. ಪುನೀತ್ ರಾಜಕುಮಾರ್ ಕನ್ನಡ ಭವನದಲ್ಲಿ ನಡೆದ ರಾಷ್ಟ್ರೀಯ ಪತ್ರಕರ್ತರ 9ನೇ ರಾಜ್ಯ ಸಮಾವೇಶ ಹಾಗೂ 2026ನೇ ಸಾಲಿನ ಸಾಮ್ರಾಟ್ ಅಶೋಕ್ ರಾಷ್ಟ್ರೀಯ ಪ್ರಶಸ್ತಿ ಪ್ರಧಾನ ಸಮಾರಂಭದಲ್ಲಿ ಅವರು ಮಾತನಾಡಿದರು.

ಕರ್ನಾಟಕ ದಲಿತ ಸಂಘರ್ಷ ಸಮಿತಿ (ರಿ) ಪರಿವರ್ತನಾವಾದ ಹಾಗೂ ಸಾಧನ ವೃದ್ಧಾಶ್ರಮ ಮತ್ತು ಅನಾಥಾಶ್ರಮ, ಬೆಂಗಳೂರು ಇವರ ಸಂಯುಕ್ತ ಆಶ್ರಯದಲ್ಲಿ ನಡೆದ ಈ ಬೃಹತ್ ಸಮಾವೇಶದಲ್ಲಿ ಸಮ್ಮುಖತೆ ವಹಿಸಿ ಮಾತನಾಡಿದ ಅವರು, "ಪ್ರತಿಯೊಬ್ಬ ಸಾಧಕನೂ ಗುರು-ಹಿರಿಯರ ಕಾಳಜಿ, ಸಮಯಪ್ರಜ್ಞೆ ಮತ್ತು ನಿಷ್ಠೆ ಹೊಂದಿದಾಗ ಮಾತ್ರ ಗುರಿ ತಲುಪಲು ಸಾಧ್ಯ. ಸಮನ್ವಯ, ಸಹೋದರತ್ವ ಮತ್ತು ಏಕ್ಯತೆ ನಮ್ಮ ಬದುಕಿನ ಅವಿಭಾಜ್ಯ ಅಂಗಗಳಾಗಬೇಕು. ಆಗಲೇ ಜೀವನ ಸಾರ್ಥಕವಾಗುತ್ತದೆ," ಎಂದು ಕರೆ ನೀಡಿದರು.


ಸಮಾರಂಭವನ್ನು ಉದ್ಘಾಟಿಸಿ ಮಾತನಾಡಿದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಧ್ವನಿ ರಾಜ್ಯಾಧ್ಯಕ್ಷ ಬಂಗ್ಲೆ ಮಲ್ಲಿಕಾರ್ಜುನ್, "ಬಡತನಕ್ಕೂ, ಕಾಯಕದ ಬೆವರಿಗೊ ಯಾವುದೇ ಜಾತಿ-ಧರ್ಮ ಭೇದವಿಲ್ಲ. ಮೂಲಭೂತ ಸೌಕರ್ಯಗಳನ್ನು ಕೇಳುವ ಹಕ್ಕು ಭಾರತೀಯರಾದ ನಮಗಿದೆ. ಎಲ್ಲಾ ಪತ್ರಕರ್ತರು ಒಗ್ಗಟ್ಟಾಗಿ ಹೋರಾಡಿದಾಗ ಮಾತ್ರ ಸರ್ಕಾರದ ಗಮನ ಸೆಳೆಯಲು ಸಾಧ್ಯ," ಎಂದು ಅಭಿಪ್ರಾಯಪಟ್ಟರು.

ಸಮಾವೇಶದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ದಲಿತ ಸಂಘರ್ಷ ಸಮಿತಿ ಪರಿವರ್ತನಾವಾದ ರಾಜ್ಯ ಪ್ರಧಾನ ಸಂಚಾಲಕ ಎಚ್. ಕೃಷ್ಣಮೂರ್ತಿ ಬೆಟ್ಟಕೋಟೆ, "ಪತ್ರಿಕಾ ಕ್ಷೇತ್ರದಲ್ಲಿ ನಕಲಿ ಪತ್ರಕರ್ತರಿಂದ ಪ್ರಾಮಾಣಿಕ ಪತ್ರಕರ್ತರಿಗೆ ಕಳಂಕ ಬರುತ್ತಿದೆ. ಸತ್ಯಸುದ್ದಿ ಬರೆಯುವ ಪತ್ರಕರ್ತರ ಸಂರಕ್ಷಣೆಗಾಗಿ ಕಾಯ್ದೆ ಜಾರಿಯಾಗಬೇಕು," ಎಂದು ರಾಜ್ಯ ಸರ್ಕಾರಕ್ಕೆ ಮನವಿ ಮಾಡಿದರು.

ಸರ್ಕಾರದ ನೀತಿಗಳ ಬಗ್ಗೆ ವಿಷಾದ ವ್ಯಕ್ತಪಡಿಸಿದ ಅವರು, ಪತ್ರಕರ್ತರ ಹಿತಾಸಕ್ತಿಯನ್ನು ಕಾಪಾಡಲು ಕೇಂದ್ರ ಹಾಗೂ ರಾಜ್ಯ ಸರ್ಕಾರಗಳು ಸ್ಪಷ್ಟ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ಕಾರ್ಯಕ್ರಮದಲ್ಲಿ ಸ್ವಾಮಿ ಚಾರಿಟೇಬಲ್ ಟ್ರಸ್ಟ್ ಕರಡಕಲ್ ಲಿಂಗಸುಗೂರು ಅಧ್ಯಕ್ಷ ಡಾ. ಮಲ್ಲಿಕಾರ್ಜುನ್ ಸ್ವಾಮಿ ಹಿರೇಮಠ್, ಅಸೋಸಿಯೇಷನ್ ಆಫ್ ಸ್ಮಾಲ್ ಆಂಡ್ ಮೀಡಿಯಂ ನ್ಯೂಸ್ ಪೇಪರ್ ಇಂಡಿಯಾ ಕರ್ನಾಟಕ ರಾಜ್ಯಾಧ್ಯಕ್ಷ ಗೋವಿಂದಯ್ಯ ವಿ ಸೇರಿದಂತೆ ರಾಜ್ಯದ ವಿವಿಧ ಜಿಲ್ಲೆಗಳಿಂದ ಆಗಮಿಸಿದ ಸಾಮ್ರಾಟ್ ಅಶೋಕ್ ಪ್ರಶಸ್ತಿ ಪುರಸ್ಕೃತರು, ವರದಿಗಾರರು, ಸಂಪಾದಕರು, ಪ್ರಗತಿಪರ ಸಾಹಿತ್ಯ ಚಿಂತಕರು, ಸಮಾಜಸೇವಕರು ಹಾಗೂ ಜನಪ್ರತಿನಿಧಿಗಳು ಉಪಸ್ಥಿತರಿದ್ದರು.

# ನೀರು ಪೂರೈಕೆಗೆ ಕ್ರಮ ಕೈಗೊಳ್ಳಿ



■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಪಟ್ಟಣದ ಬಸ್ತಿಬಣದಲ್ಲಿನ ಉಮಚಗಿಯವರ ಓಣಿ, ಕೌಲಪೇಟೆ ಓಣಿಗಳಲ್ಲಿ ಕಳೆದ ಎಂಟು ದಿನಗಳಿಂದ ಕೊಳವೆ ಬಾವಿ ನೀರು ಪೂರೈಕೆ ಆಗಿಲ್ಲ. ಇದರಿಂದಾಗಿ ಇಲ್ಲಿನ ನಿವಾಸಿಗಳಿಗೆ ನೀರಿನ ಹಾಹಾಕಾರ ಉಂಟಾಗಿದ್ದು ಬೇಗನೇ ನೀರು ಪೂರೈಸಲು ಕ್ರಮ ಕೈಗೊಳ್ಳಬೇಕು ಆಗ್ರಹಿಸಿ ಗುರುವಾರ ನಿವಾಸಿಗಳು ಪುರಸಭೆ ವ್ಯವಸ್ಥಾಪಕಿ ಮಂಜುಳ ಹೂಗಾರ ಅವರಿಗೆ ಮನವಿ ಸಲ್ಲಿಸಿದರು.

ನದಿ ನೀರು ತಿಂಗಳಿಗೊಮ್ಮೆ ಪೂರೈಕೆ ಆಗುತ್ತಿದೆ. ಹೀಗಾಗಿ ಉಳಿದ ದಿನಗಳಲ್ಲಿ ಕೊಳವೆ ಬಾವಿ ನೀರೇ ನಮಗೆ ಗತಿ. ಆದರೆ ಎಂಟು ದಿನಗಳಿಂದ ಆ ನೀರೂ ಪೂರೈಕೆ ಆಗುತ್ತಿಲ್ಲ. ದನ-ಕರುಗಳಿಗೆ ನೀರು ಕುಡಿಸಲೂ ಸಹ ತೊಂದರೆ ಆಗಿದೆ. ಕಾರಣ ಬೇಗನೇ ನೀರು ಪೂರೈಸಬೇಕು. ಓಣಿಯಲ್ಲಿನ ಚರಂಡಿಗಳನ್ನು ಸ್ವಚ್ಛ ಮಾಡಿಲ್ಲ. ಹೀಗಾಗಿ ಓಣಿ ತುಂಬ ಹೊಲಸು ವಾಸನೆ ತುಂಬಿದೆ. ಆದಷ್ಟು ಬೇಗನೇ ಪುರಸಭೆ ಚರಂಡಿಗಳನ್ನು ಸ್ವಚ್ಛ ಮಾಡಬೇಕು ಎಂದು ಒತ್ತಾಯಿಸಿದರು.

ಈ ಸಂದರ್ಭದಲ್ಲಿ ಮಲ್ಲಿಕಾರ್ಜುನ ನೀರಾಲೋಟಿ, ಪರಮೇಶ ಹತ್ತಿಕಟ್ಟಿ, ಅಶೋಕ ಹೊಂಗಲ, ನಾಗರಾಜ ಅಂಬಲಿ, ಮಲ್ಲಪ್ಪ ಉಮಚಗಿ, ಅಕ್ಷಯ್ ಓದುನವರ ಮತ್ತಿತರರು ಇದ್ದರು.

### ಕರ್ನಾಟಕದ ಗಾಂಧಿ ಹರ್ಡೇಕರ ಮಂಜಪ್ಪನವರ 140ನೇ ಜಯಂತಿ ನಿಮಿತ್ತ ದತ್ತಿ ಉಪನ್ಯಾಸ

# ಹರ್ಡೇಕರ ಮಂಜಪ್ಪನವರು ದೇಶಭಕ್ತ, ಬಸವ ಭಕ್ತರು

■ ವಿಜಯಸಾಕ್ಷಿ ಸುದ್ದಿ, ಗದಗ

ಹರ್ಡೇಕರ 'ಮಂಜಪ್ಪನವರು ತಂದೆ ಸಕಾರಾಮ, ತಾಯಿ ಮಂಜಮ್ಮನರು ಅಕ್ಕರೆಯೊಂದಿಗೆ ಬೆಳೆದು, ಅಣ್ಣ ಮಧುಲಿಂಗಪ್ಪನವರ ಸಹಕಾರ ಪ್ರೀತಿ-ವಾತ್ಸಲ್ಯದೊಂದಿಗೆ ಬನವಾಸಿಯಿಂದ ಆಲಮಟ್ಟಿಯವರೆಗೆ ಜೀವನ ಸಾಗಿಸಿದರು ಎಂದು ಆಲಮಟ್ಟಿ ಕಾಲೇಜಿನ ಪ್ರೊ. ತೋಟಪ್ಪ ಕರದಾನಿ ಅಭಿಪ್ರಾಯಪಟ್ಟರು.

ಅವರು ಬಸವದಳ ಗದಗ ಹಾಗೂ ಗದಗ ತಾಲೂಕಾ ಶರಣ ಸಾಹಿತ್ಯ ಪರಿಷತ್ತು, ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆ ಇವುಗಳ ಸಂಯುಕ್ತಾಶ್ರಯದಲ್ಲಿ ನಡೆದ ಕರ್ನಾಟಕದ ಗಾಂಧಿ ಹರ್ಡೇಕರ ಮಂಜಪ್ಪನವರ 140ನೇ ಜಯಂತಿ ಅಂಗವಾಗಿ ದತ್ತಿ ಉಪನ್ಯಾಸ ಕಾರ್ಯಕ್ರಮದಲ್ಲಿ ಮಾತನಾಡಿದರು.




ಹರ್ಡೇಕರ ಮಂಜಪ್ಪನವರು ಶಿಸ್ತಿನ ಶಿಕ್ಷಕರಾಗಿ, ಮಕ್ಕಳ ಸಾಹಿತಿಯಾಗಿ, ಪತ್ರಕರ್ತರಾಗಿ, ಸಂಪಾದಕರಾಗಿ, ಸಂಘಟನಾ ಪಿತಾಮಹರಾಗಿ, ದೇಶಭಕ್ತರಾಗಿ, ಗಾಂಧಿವಾದಿಯಾಗಿ, ಬಸವೇಶ್ವರ ಸೇವಾದಳದ ಸ್ಥಾಪಕರಾಗಿ, ಮೊಟ್ಟ ಮೊದಲು ಬಸವ ಜಯಂತಿ, ಅಕ್ಕಮಹಾದೇವಿ ಜಯಂತಿ ಆಚರಿಸುವ ಮೂಲಕ ಲಿಂಗಾಯತ ಧರ್ಮ ಪ್ರಚಾರಕರಾಗಿ, ರಾಜಕೀಯ, ಸಾಮಾಜಿಕ, ಧಾರ್ಮಿಕವಾಗಿ ಬಹುಮುಖ ವ್ಯಕ್ತಿತ್ವವುಳ್ಳವರಾಗಿದ್ದರು. ತಮ್ಮನ್ನು ಶ್ರೀಗಂಧದದಂತೆ ತೇದು ನಾಡಿಗೆ, ರಾಷ್ಟ್ರಕ್ಕೆ, ತರುಣರಿಗೆ, ಮಕ್ಕಳಿಗೆ ಪ್ರೇರಣಾಶಕ್ತಿಯಾಗಿದ್ದರು ಎಂದರು.

ಭಾರತ ದೇಶ ಸ್ವಾತಂತ್ರ್ಯಗೊಳ್ಳಬೇಕೆಂಬ ಕನಸು ಕಂಡಿದ್ದ ಮಂಜಪ್ಪನವರು ಆಲಮಟ್ಟಿಯಲ್ಲಿಯೇ ಸ್ವಾತಂತ್ರ್ಯ ದೊರಕುವ ಮೊದಲೇ 03-01-1947ರಲ್ಲಿ ಬಸವ ಗುರುವಿನ ಮಹಾಬಯಲಿನಲ್ಲಿ ಬಯಲಾದರು. ಅವರ ಪ್ರೇರಣೆ ನಮಗೂ ಲಭಿಸಲಿ ಎಂದು ಆಶಿಸಿದರು.

ಶರಣ ಸಾಹಿತ್ಯ ಪರಿಷತ್ತಿನ ದತ್ತಿ ಉಪನ್ಯಾಸದ ಕುರಿತು ಮತ್ತು ದತ್ತಿದಾನಿಗಳ ಕುರಿತು ಗದಗ ಜಿಲ್ಲಾ ಶರಣ ಸಾಹಿತ್ಯ ಪರಿಷತ್ತಿನ ಅಧ್ಯಕ್ಷರಾದ ಶರಣ ಕೆ.ಎ. ಬಳಿಗಾರ ಮಾಹಿತಿ ನೀಡಿದರು. ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಶರಣ ಎಸ್.ಎನ್. ಹಕಾರಿ ಮಾತನಾಡಿದರು. ವೇದಿಕೆಯ ಮೇಲೆ ಶರಣ ದಂಪತಿಗಳಾದ ಎಂ.ಬಿ. ಲಿಂಗಧಾಳ ಹಾಗೂ ಸರೋಜಕ್ಕ ಲಿಂಗಧಾಳ ಉಪಸ್ಥಿತರಿದ್ದರು.

> ದತ್ತಿದಾನಿಗಳಾದ ಶರಣ ಎಂ.ಬಿ. ಲಿಂಗಧಾಳರವರು ಮಾತನಾಡುತ್ತಾ, ನಮ್ಮ ತಂದೆ-ತಾಯಿಗಳ ಹೆಸರಿನಲ್ಲಿ ದತ್ತಿನಿಧಿ ಸ್ಥಾಪಿಸಿ, ಅದರ ಮೂಲಕ ನಿರಂಜನ ಶರಣ ಹರ್ಡೇಕರ ಮಂಜಪ್ಪನವರ ಜಯಂತಿಯನ್ನು ಆಚರಿಸುತ್ತಿರುವುದು ನಮ್ಮ ಕುಟುಂಬ ವರ್ಗದವರಿಗೆ ಬಹಳ ಸಂತಸ, ನಮ್ಮ ಮಕ್ಕಳಿಗೆ ಮತ್ತು ಮೊಮ್ಮಕ್ಕಳಿಗೆ ಸಂಸ್ಕಾರ ದೊರೆತಂತಾಗುತ್ತದೆ ಎಂದರು.

ಬಸವದಳದ ಶರಣೆಯರಾದ ಗಂಗಮ್ಮ ಹೂಗಾರ ಹಾಗೂ ಸಂಜೀವಿನಿ ಎಂ.ಬಂಡಿವಡ್ಡರ ವಚನ ಪ್ರಾರ್ಥನೆ ಮಾಡಿದರು. ಗದಗ ತಾಲೂಕಾ ಕದಳಿ ಮಹಿಳಾ ವೇದಿಕೆ ಅಧ್ಯಕ್ಷರಾದ ಶರಣೆ ಸುಲೋಚನಾ ಎಂ.ಐಹೊಳ್ಳಿ ಸ್ವಾಗತಿಸಿದರು. ಗದಗ ತಾಲೂಕಾಧ್ಯಕ್ಷರಾದ ಶರಣ ಪ್ರಕಾಶ ತಿ.ಅಸುಂಡಿಯವರು ಕಾರ್ಯಕ್ರಮ ನಿರೂಪಿಸಿದರು. ಶರಣು ಸಮರ್ಪಣೆಯನ್ನು ಶರಣೆ ಗಿರಿಜಕ್ಕ ಧರ್ಮರಡ್ಡಿಯವರಿಂದ ಜರುಗಿತು.

ಸಮಾರಂಭದಲ್ಲಿ ಶರಣೆಯರಾದ ಮಂಗಳಕ್ಕ ನಾಲ್ವಾಡ, ಸುವರ್ಣಾ ಗಾಳಪ್ಪನವರ, ಸುಜಾತಾ ವಾರದ, ನೀಲಲೋಚನಾ ಹಂಚಿನಾಳ, ಚಿನ್ಮಯಿ ಲಿಂಗಧಾಳ, ಸನ್ನಿಧಿ ಲಿಂಗಧಾಳ, ಶರಣರಾದ ಸಿದ್ಧಲಿಂಗಪ್ಪ ಹಂಚಿನಾಳ, ಶೇಖಣ್ಣ ಕವಳಿಕಾಯಿ, ರಾಮಣ್ಣ ಕಳ್ಳಿಮನಿ, ಶೇಖಣ್ಣ ಕಳಸಾಪೂರಶೆಟ್ಟರ, ಮಹಾಂತೇಶ ಅಂಗಡಿ, ವೀರೇಶ ಲಿಂಗಧಾಳ, ಸುರೇಶ ಅಂಗಡಿ, ಚನ್ನಬಸಪ್ಪ ಅಂಗಡಿ, ಪ್ರಶಾಂತ ಲಿಂಗಧಾಳ, ಗವಿಸಿದ್ಧಪ್ಪ ಪಲ್ಲೇದ, ತಿಮ್ಮರಡ್ಡಿ, ಮುಗಳಿ ಮುಂತಾದವರು ಭಾಗವಹಿಸಿದ್ದರು.

# ಪತ್ರಿಕೋದ್ಯಮದ ಕನ್ನಡಿಯಲ್ಲಿ ಭಾರತದ ಹಳ್ಳಿಗಳು ಕಾಣಿಸಬೇಕು

▶▶ ಮೊದಲನೇ ಪುಟದಿಂದ

ಪತ್ರಿಕೋದ್ಯಮವು ಸಮಾಜದ ಕನ್ನಡಿಯಾಗಿದ್ದರೆ, ಆ ಕನ್ನಡಿಯಲ್ಲಿ ಭಾರತದ ಶೇ. 70 ಜನಸಂಖ್ಯೆ ಇರುವ ಹಳ್ಳಿಗಳು ಕಾಣಿಸಬೇಕು. ಹೀಗಾಗಿ ಇಂಥಾ ವಿಶ್ಲೇಷಣೆಗಳು ಜನರ ಧ್ವನಿಯಾಗಿ ಗ್ರಾಮೀಣ ಭಾರತವನ್ನು ಬೆಳೆಸಬೇಕು. ಜೊತೆಗೆ ಹಳ್ಳಿಗಳ ಕಲೆ, ಸಂಸ್ಕೃತಿ, ಭಾಷೆ ಮತ್ತು ಅಲ್ಲಿನ ಜನರ ದೈನಂದಿನ ಹೋರಾಟಗಳಿಗೂ ಕನ್ನಡಿ ಹಿಡಿಯಬೇಕು. ಈ ಕನ್ನಡಿಯಲ್ಲಿ ವಿಧಾನಸೌಧದಲ್ಲಿ ಕುಳಿತಿರುವ ಅಧಿಕಾರಿಗಳು ಮುಖ ನೋಡಿಕೊಳ್ಳಬೇಕು ಎಂದರು.

ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ.ಹೆಬ್ಬಳ್ಳಿ ಅಧ್ಯಕ್ಷತೆ ವಹಿಸಿದ್ದರು. ಸಭಾಪತಿ ಬಸವರಾಜ ಹೊರಟ್ಟಿ, ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ (ಪ್ರ) ಹಾಗೂ ಕುಲಸಚಿವ ಪ್ರೊ. ಸುರೇಶ ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರ ಅಧ್ಯಕ್ಷರಾದ ಬಿ.ಬಿ. ಅಸೂಟಿ, ಅವ್ವ ಸೇವಾ ಟ್ರಸ್ಟ್ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ಪ್ರಶಸ್ತಿ ಪುರಸ್ಕೃತ ತನುಜಾ ನಾಯಕ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.

# ಶ್ರೀ ರಾಜೇಶ್ವರಿ ಕಲಾ ಕುಟೀರದ ವಾರ್ಷಿಕೋತ್ಸವ ನಾಳೆ

■ ವಿಜಯಸಾಕ್ಷಿ ಸುದ್ದಿ, ಗದಗ

ಕನ್ನಡ ಮತ್ತು ಕಲಾಭಿವೃದ್ಧಿ ಸೇವಾ ಸಂಸ್ಥೆ ಶ್ರೀ ರಾಜರಾಜೇಶ್ವರಿ ಕಲಾ ಕುಟೀರ ಇದರ 25ನೇ ವಾರ್ಷಿಕೋತ್ಸವ ಸಮಾರಂಭ ಸಂಗೀತ ನೃತ್ಯೋಲ್ಲಾಸ-2026 ಫೆ. 28ರ ಶನಿವಾರ ಸಾಯಂಕಾಲ 4.30ಕ್ಕೆ ಹುಬ್ಬಳ್ಳಿ ರಸ್ತೆಯ ಜಿಲ್ಲಾಧಿಕಾರಿಗಳ ಕಾರ್ಯಾಲಯದ ಎದುರಿನಲ್ಲಿರುವ ಭಾರತರತ್ನ ಪಂ. ಭೀಮಸೇನ ಜೋಶಿ ರಂಗಮಂದಿರದಲ್ಲಿ ಜರುಗಲಿದೆ.

ಸಮಾರಂಭವನ್ನು ನಗರಸಭಾ ಸದಸ್ಯೆ ಅನಿತಾ ವಿಜಯಕುಮಾರ ಗಡ್ಡಿ ಉದ್ಘಾಟಿಸಲಿದ್ದು, ಗದಗ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕ ಡಾ. ಬಸವರಾಜ ಬಳ್ಳಾರಿ, ಲಿಂಗಾಯತ ಪ್ರಗತಿಶೀಲ ಸಂಘದ ಅಧ್ಯಕ್ಷ ಬಾಲಚಂದ್ರ ಭರಮಗೌಡ್ರ, ಗದಗ ಲಯನ್ಸ್ ಕ್ಲಬ್ ಅಧ್ಯಕ್ಷ ರಾಜು ವೇರ್ಣೇಕರ, ದೈವಜ್ಞ ಸಮಾಜೋನ್ನತಿ ಸಂಘದ ಅಧ್ಯಕ್ಷ ಅರವಿಂದ ಪಾಲನಕರ ಅತಿಥಿಗಳಾಗಿ ಪಾಲ್ಗೊಳ್ಳಲಿದ್ದಾರೆ.

ಇದೇ ಸಂದರ್ಭದಲ್ಲಿ ಪತ್ರಕರ್ತ ಗಣೇಶ ಪೈ, ಪಿ.ಪಿ.ಜಿ ಅಂಧರ ವಸತಿ ಸಂಗೀತ ಪಾಠಶಾಲೆಯ ಪ್ರಾಚಾರ್ಯ ಕಳಕಪ್ಪ ಮದ್ಲಾಪೂರ ಹಾಗೂ ಕಲಾವಿದ ಬಸವರಾಜ ನೆಲಜೇರಿ ಅವರನ್ನು ಸನ್ಮಾನಿಸಿ ಗೌರವಿಸಲಾಗುವುದು. ಸರ್ವರೂ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಸೇವಾ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷ ಗಜಾನನ ವೇರ್ಣೇಕರ ಪ್ರಕಟಣೆಯಲ್ಲಿ ಕೋರಿದ್ದಾರೆ.

# ಪ್ರಜ್ವಲ್ ರಿತ್ತಿಗೆ ನಿವೇಶನ ವಿತರಣೆ



■ ವಿಜಯಸಾಕ್ಷಿ ಸುದ್ದಿ, ಲಕ್ಕುಂಡಿ

ತನ್ನ ಮನೆ ನಿರ್ಮಾಣದ ಸಂದರ್ಭದಲ್ಲಿ ಚಿನ್ನಾಭರಣಗಳ ನಿಧಿ ಸಿಕ್ಕಿದ್ದನ್ನು ಸರಕಾರಕ್ಕೆ ತಲುಪಿಸಿ ಪ್ರಾಮಾಣಿಕತೆ ಮೆರೆದ ಬಾಲಕ ಪ್ರಜ್ವಲ್ ರಿತ್ತಿ ಕುಟುಂಬಕ್ಕೆ ಗುರುವಾರ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿಗಳು ನಿವೇಶನವನ್ನು ವಿತರಿಸಿದರು.

ಈ ಕುರಿತು ಮಾಹಿತಿ ನೀಡಿದ ಅಭಿವೃದ್ಧಿ ಅಧಿಕಾರಿ ಅಮೀರನಾಯಕ, ಮಾರುತಿ ನಗರದ 7 ಎಕರೆ ಕ್ಷೇತ್ರದಲ್ಲಿಯ 274/4ರ ಸರ್ವೇಯಲ್ಲಿ ನಿವೇಶನವನ್ನು ವಿತರಿಸಲಾಗಿದ್ದು, ಸ್ಥಳದಲ್ಲಿ ಜಿ.ಪಿ.ಎಸ್ ಭಾವಚಿತ್ರವನ್ನು ತೆಗೆಯಲಾಗಿದೆ ಎಂದು ತಿಳಿಸಿದರು.

ಕಳೆದ ಜ. 22ರಂದು ಗ್ರಾಮ ಪಂಚಾಯಿತಿಯು ವಿಶೇಷ ಗ್ರಾಮ ಸಭೆಯನ್ನು ಕರೆದು ಪ್ರಜ್ವಲ್‌ನ ತಾಯಿ ಗಂಗವ್ವಳನ್ನು ಫಲಾನುಭವಿ ಎಂದು ಆಯ್ಕೆ ಮಾಡಿತ್ತು. ನಂತರ ಗಣರಾಜ್ಯೋತ್ಸವದಂದು ಜಿಲ್ಲಾ ಉಸ್ತುವಾರಿ ಸಚಿವ ಎಚ್.ಕೆ. ಪಾಟೀಲರು ಸರಕಾರದಿಂದ 5 ಲಕ್ಷ ರೂ ಬಹುಮಾನದೊಂದಿಗೆ ನಿವೇಶನ ನೀಡುವ ಪತ್ರವನ್ನು ನೀಡಿದ್ದರು. ಅದರಂತೆ ಇಂದು ರಿತ್ತಿ ಕುಟುಂಬಕ್ಕೆ ನಿವೇಶನವನ್ನು ನೀಡಲಾಗಿದೆ.

### ಹೋಳಿ ಹಬ್ಬದ ಪ್ರಯುಕ್ತ ಕರೆಯಲಾಗಿದ್ದ ಶಾಂತಿ ಸಭೆಯಲ್ಲಿ ಸಿಪಿಐ ಬಿ.ವ್ಹಿ. ನ್ಯಾಮಗೌಡ

# ಹಬ್ಬದಲ್ಲಿ ರಾಸಾಯನಿಕ ಬಣ್ಣ ಬಳಸದಿರಿ

■ ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ

ಲಕ್ಷ್ಮೇಶ್ವರ ಸೇರಿ ತಾಲೂಕಿನಾದ್ಯಂತ ನಡೆಯಲಿರುವ ಹೋಳಿ ಹಬ್ಬವನ್ನು ಎಲ್ಲರೂ ಶಾಂತಿ-ಸೌಹಾರ್ದತೆಯಿಂದ ಆಚರಿಸಬೇಕು. ಕಾನೂನು ಸುವ್ಯವಸ್ಥೆ ಕಾಪಾಡುವ ನಿಟ್ಟಿನಲ್ಲಿ ಪೊಲೀಸ್ ಇಲಾಖೆಯಿಂದ ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಲಾಗುವುದು ಎಂದು ಸಿಪಿಐ ಬಿ.ವ್ಹಿ. ನ್ಯಾಮಗೌಡ ಹೇಳಿದರು.

ಅವರು ಗುರುವಾರ ಪಟ್ಟಣದ ಪೊಲೀಸ್ ಠಾಣೆಯಲ್ಲಿ ಹೋಳಿ ಹಬ್ಬದ ಪ್ರಯುಕ್ತ ಕರೆಯಲಾಗಿದ್ದ ಶಾಂತಿ ಸಭೆಯಲ್ಲಿ ಮಾತನಾಡುತ್ತಿದ್ದರು.




ಹಬ್ಬಗಳು ನಾಡಿನ ಸಂಪ್ರದಾಯದ ಪ್ರತೀಕ ಮತ್ತು ಪರಸ್ಪರರಲ್ಲಿ ಸ್ನೇಹ, ಸೌಹಾರ್ದತೆ ಬೆಸೆಯುವ ಕೊಂಡಿಯಾಗಿವೆ. ಹಬ್ಬದ ಸಂದರ್ಭದಲ್ಲಿ ಆರೋಗ್ಯದ ಮೇಲೆ ದುಷ್ಪರಿಣಾಮ ಬೀರುವ ರಾಸಾಯನಿಕಯುಕ್ತ ಬಣ್ಣ ಬಳಸಬಾರದು. ಮುಂಜಾಗೃತಾ ಕ್ರಮವಾಗಿ ಸೂಕ್ತ ಬಂದೋಬಸ್ತ್ ಕ್ರಮಗಳನ್ನು ಕೈಗೊಳ್ಳಲಾಗಿದ್ದು, ಅಹಿತಕರ ಘಟನೆಗೆ ಕಾರಣರಾದವರ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ಹಬ್ಬದ ದಿನ ಬೇಕಾಬಿಟ್ಟಿ ವರ್ತನೆಯಿಂದ ಸಾಮಾಜಿಕ ಶಾಂತಿಗೆ ಭಂಗವನ್ನುಂಟುಮಾಡುವವರ ವಿರುದ್ಧ ಕ್ರಮ ಕೈಗೊಳ್ಳಲಾಗುವುದು. ಹಬ್ಬದ ಸಮಯದಲ್ಲಿ ಪಿಯುಸಿ, ಎಸ್‌ಎಸ್‌ಎಲ್‌ಸಿ ಪರೀಕ್ಷೆಗಳು ನಡೆಯುತ್ತಿರುವುದರಿಂದ ಪರೀಕ್ಷಾರ್ಥಿಗಳಿಗೆ ತೊಂದರೆ-ಯಾಗದಂತೆ ಹಬ್ಬ ಆಚರಣೆ ಮಾಡಬೇಕು ಎಂದು ಹೇಳಿದರು.

ಪಿಎಸ್‌ಐ ನಾಗರಾಜ ಗಡದ ಮಾತನಾಡಿ, ಹಬ್ಬದಲ್ಲಿ ರಾಸಾಯನಿಕ ಮಿಶ್ರಿತ ಬಣ್ಣವನ್ನು ಬಳಸಬೇಡಿ, ಹಬ್ಬದ ದಿನ ಬೈಕ್‌ಗಳ ಕರ್ಕಶ ಶಬ್ದ ಹಾಗೂ ಟ್ರ್ಯಾಕ್ಟರ್‌ನಲ್ಲಿ ಅಬ್ಬರದ ಸೌಂಡ್ ಮೂಲಕ ಸಾರ್ವಜನಿಕರಿಗೆ, ವಿದ್ಯಾರ್ಥಿಗಳ ಓದಿಗೆ ತೊಂದರೆ ಮಾಡಬೇಡಿ. ಕಳೆದ ಬಾರಿ ವಿದ್ಯಾರ್ಥಿನಿಯರು ಇರುವ ಬಸ್‌ನಲ್ಲಿ ಬಣ್ಣ ಎರಚಿ ವಿದ್ಯಾರ್ಥಿನಿಯರ ಆರೋಗ್ಯದಲ್ಲಿ ಸಮಸ್ಯೆ ಉಂಟಾಗಿತ್ತು. ಅಂತಹ ಘಟನೆಗಳು ನಡೆಯದಂತೆ ನಿಗಾವಹಿಸುತ್ತೇವೆ. ಹೋಳಿ ಹಬ್ಬವನ್ನು ಸಹೋದರತ್ವ ಭಾವನೆಯಿಂದ ಶಾಂತಿಯುತ ಮತ್ತು ಅರ್ಥಪೂರ್ಣವಾಗಿ ಆಚರಿಸಿ ಎಂದರು.

> ಮಾ.3ರಂದು ಎಲ್ಲೆಡೆ ಕಾಮರತಿ ಮೂರ್ತಿ ಪ್ರತಿಷ್ಠಾಪನೆಯೊಂದಿಗೆ ಕೆಲ ಗ್ರಾಮಗಳಲ್ಲಿ ಬಣ್ಣದೋಕುಳಿ ನಡೆಯಲಿದೆ ಮಾ. 4ರಂದು ತಾಲೂಕಿನ ಗ್ರಾಮೀಣ ಭಾಗದಲ್ಲಿ ಮತ್ತು ಮಾ. 7ರಂದು ಲಕ್ಷ್ಮೇಶ್ವರದಲ್ಲಿ ರಂಗ ಪಂಚಮಿ ನಡೆಯಲಿದೆ. ಇತ್ತೀಚೆಗಷ್ಟೇ ಗ್ರಾಮದೇವಿ ಜಾತ್ರೆ ನಡೆದ ಹಿನ್ನೆಲೆಯಲ್ಲಿ ಈ ವರ್ಷ ಶಿಗ್ಲಿಯಲ್ಲಿ ರಂಗಿನೋಕುಳಿ ಆಡದಿರಲು ಗ್ರಾಮಸ್ಥರು ತೀರ್ಮಾನಿಸಿದ್ದಾರೆ.

ಹಿರಿಯರಾದ ಪಿ.ಬಿ. ಖರಾಟೆ, ಗಂಗಾಧರ ಮೆಣಸಿನಕಾಯಿ ಮಾತನಾಡಿ, ಸ್ನೇಹ ಸೌಹಾರ್ದತೆ ಮತ್ತು ಧಾರ್ಮಿಕ ಬಾಂಧವ್ಯ ವೃದ್ಧಿಸುವ ಪವಿತ್ರ ಹೋಳಿ ಹಬ್ಬಕ್ಕೆ ಸಾಂಪ್ರದಾಯಿಕ, ವೈಜ್ಞಾನಿಕ ಹಿನ್ನೆಲೆಯಿದ್ದು, ಅವುಗಳನ್ನು ಮುಂದಿನ ಸಮಾಜಕ್ಕೆ ಕೊಂಡೊಯ್ಯುವ ಜವಾಬ್ದಾರಿ ಎಲ್ಲರದ್ದಾಗಿದೆ. ಪಟ್ಟಣದಲ್ಲಿ ಟ್ರಾಫಿಕ್ ಸಮಸ್ಯೆ ನಿಯಂತ್ರಣಕ್ಕೆ ಪೊಲೀಸ್ ಮತ್ತು ಪುರಸಭೆ ಜಂಟಿ ಕಾರ್ಯಾಚರಣೆ ಮೂಲಕ ಸುಗಮ ಸಂಚಾರಕ್ಕೆ ಅಗತ್ಯ ಕ್ರಮ ಕೈಗೊಳ್ಳಬೇಕು ಎಂದರು.

ಈ ವೇಳೆ ಶಿವಣ್ಣ ಕಟಗಿ, ಮಾಬುಸಾಬ ಮುಳುಗುಂದ, ಶರಣು ಗೋಡಿ, ನವೀನ ಹಿರೇಮಠ, ವಿಜಯ ಕುಂಬಾರ, ಹಾಲಪ್ಪ ಸೂರಣಗಿ, ಮಂಜುನಾಥ ಶೆರಸೂರಿ, ಮಲ್ಲೇಶಪ್ಪ ಬಸಾಪುರ, ದಾವೂದಖಾನ ಕಾರಡಗಿ, ಯೂನುಷ್ ಚೌರಿ, ಗೋಪಿ ಪಾಣಿಗಟ್ಟಿ, ಮುತ್ತು ಪಾಣಿಗಟ್ಟಿ, ಭರಮಗೌಡ ಪಾಣಿಗಟ್ಟಿ, ಮಂಜುನಾಥ ಕೊಡಳ್ಳಿ, ಫಕ್ಕೀರೇಶ ಅಣ್ಣಿಗೇರಿ, ಬಸಣ್ಣ ಬೆಂಗಳೂರು, ಜಗದೀಶ ಕೋಲಕಾರ, ಶೇಖಣ್ಣ ಹಂಜಗಿ, ಹಿಂದೂ-ಮುಸ್ಲಿಂ ಬಾಂಧವರು ಇದ್ದರು.

# ಧಾರವಾಡ ಪ್ರತಿಭಟನೆಗೆ ಫಲ: 56 ಸಾವಿರ ಹುದ್ದೆ ಭರ್ತಿಗೆ ಕ್ಯಾಬಿನೆಟ್ ಒಪ್ಪಿಗೆ

■ ವಿಜಯಸಾಕ್ಷಿ ಸುದ್ದಿ, ಬೆಂಗಳೂರು

ಇತ್ತೀಚೆಗೆ ವಿದ್ಯಾಕಾಶಿ ಧಾರವಾಡದಲ್ಲಿ ಉದ್ಯೋಗಾಕಾಂಕ್ಷಿಗಳು ನಡೆಸಿದ ಧಾರವಾಡ ಪ್ರೊಟೆಸ್ಟ್ ರಾಜ್ಯಾದ್ಯಂತ ಭಾರೀ ಚರ್ಚೆಗೆ ಕಾರಣವಾಗಿದ್ದು, ಇದನ್ನು ಸಿದ್ದರಾಮಯ್ಯ ನೇತೃತ್ವದ ಸರ್ಕಾರ ಗಂಭೀರವಾಗಿ ಪರಿಗಣಿಸಿದೆ.

ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ನೇಮಕಾತಿಗೆ ಸಂಬಂಧಿಸಿದ ಸಾಧಕ-ಬಾಧಕಗಳ ಬಗ್ಗೆ ವಿಸ್ತೃತ ಚರ್ಚೆ ನಡೆದಿದ್ದು, ಅಂತಿಮವಾಗಿ ಮೀಸಲಾತಿ ಮಿತಿ 50% ಮೀರದಂತೆ ಒಳಮೀಸಲಾತಿಯೊಂದಿಗೆ ನೇಮಕಾತಿ ನಡೆಸಲು ತೀರ್ಮಾನಿಸಲಾಗಿದೆ. ಇದರಂತೆ, ಕರ್ನಾಟಕದ ವಿವಿಧ ಇಲಾಖೆಗಳಲ್ಲಿರುವ ಸುಮಾರು 56 ಸಾವಿರ ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಸಚಿವ ಸಂಪುಟ ಒಪ್ಪಿಗೆ ನೀಡಿದ್ದು, ಇದರಿಂದ ಉದ್ಯೋಗಾಕಾಂಕ್ಷಿಗಳ ಹೋರಾಟಕ್ಕೆ ಸ್ಪಷ್ಟ ಫಲ ದೊರಕಿದಂತಾಗಿದೆ.

# ನಿಧನ

## ಕಮಲಾಬಾಯಿ ಪುರಾಣಿಕ



**ಲಕ್ಷ್ಮೇಶ್ವರ:** ಪಟ್ಟಣದ ಬಸ್ತಿಕೇರಿಯ ಬ್ರಾಹ್ಮಣ ಸಮಾಜದ ಹಿರಿಯರು, ಆಧ್ಯಾತ್ಮ ಚಿಂತಕರೂ ಆಗಿದ್ದ ಕಮಲಾಬಾಯಿ ನಾರಾಯಣಭಟ್ ಪುರಾಣಿಕ (76) ಇವರು ಗುರುವಾರ ಸಂಜೆ ನಿಧನರಾದರು. ಮೃತರಿಗೆ ಪತಿ, ಪುತ್ರಿಯರು ಸೇರಿದಂತೆ ಅಪಾರ ಬಂಧು-ಬಳಗವಿದೆ.

## ನೀಲಮ್ಮ ಕೋಂ ಬಾಳಪ್ಪ ಡೊಳ್ಳಿನ



**ಡಂಬಳ:** ಡಂಬಳ ಗ್ರಾಮದ ಹಾಲುಮತ ಸಮಾಜದ ಹಿರಿಯರಾದ ನೀಲಮ್ಮ ಕೋಂ ಬಾಳಪ್ಪ ಡೊಳ್ಳಿನ (101) ಬುಧವಾರ ನಿಧನ ಹೊಂದಿದರು.

ಮೃತರು ಮೂವರು ಪುತ್ರರು, ಮೊಮ್ಮಕ್ಕಳು, ಸೊಸೆಯಂದಿರು ಸೇರಿದಂತೆ ಅಪಾರ ಬಂಧು-ಬಳಗ ಅಗಲಿದ್ದಾರೆ.

# ಪತ್ರಿಕೋದ್ಯಮಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರ: ಕೆ. ವಿ. ಪ್ರಭಾಕರ್

▶▶ ಮೊದಲನೇ ಪುಟದಿಂದ

ಪತ್ರಕರ್ತರ ಸಮಸ್ಯೆಗಳ ಪರಿಹಾರಕ್ಕೆ ಮುಖ್ಯಮಂತ್ರಿ ಸಿದ್ದರಾಮಯ್ಯ ಭರವಸೆ ನೀಡಿದ್ದಾರೆ. ಸಮಾಜ ಸುಧಾರಣೆಯಲ್ಲಿ ಮಾಧ್ಯಮದ ಪಾತ್ರವನ್ನು ಅವರು ಸಮಗ್ರವಾಗಿ ಅರಿತುಕೊಂಡಿದ್ದು, ಆ ನಿಟ್ಟಿನಲ್ಲಿ ಪತ್ರಕರ್ತರಿಗೆ ಅಗತ್ಯ ಗೌರವ ನೀಡುತ್ತಿದ್ದಾರೆ ಎಂದು ಹೇಳಿದರು.

ಮಾಧ್ಯಮ ಸಲಹೆಗಾರನಾಗಿ ಪತ್ರಕರ್ತರ ಸಮಸ್ಯೆಗಳನ್ನು ಬಗೆಹರಿಸಲು ಪ್ರಾಮಾಣಿಕ ಪ್ರಯತ್ನ ಮಾಡುತ್ತಿದ್ದೇನೆ. ಜಿಲ್ಲಾ ಮಟ್ಟದ ಪತ್ರಿಕೆಗಳಿಗೆ ಸರ್ಕಾರ ಹೆಚ್ಚಿನ ಮಹತ್ವ ನೀಡಿದ್ದು, ಯಾವುದೇ ಕಾರಣಕ್ಕೂ ಜಿಲ್ಲಾ ಪತ್ರಿಕೆಗಳ ಜಾಹೀರಾತು ಕಡಿತವಾಗಬಾರದೆಂದು ಮುಖ್ಯಮಂತ್ರಿಗಳು ಸೂಚನೆ ನೀಡಿದ್ದಾರೆ. ಗ್ರಾಮೀಣ ಪತ್ರಕರ್ತರಿಗೆ ಬಸ್ ಪಾಸ್ ಯೋಜನೆ ಜಾರಿಗೆ ತಂದಿದ್ದು, ವಿಶೇಷ ಆರೋಗ್ಯ ಯೋಜನೆ ಕುರಿತು ಚರ್ಚೆ ನಡೆಯುತ್ತಿದೆ. ಸರ್ಕಾರ ಸದಾ ಪತ್ರಿಕೆಗಳ ಬೆಂಬಲಕ್ಕೆ ಬದ್ಧವಾಗಿದೆ ಎಂದು ಭರವಸೆ ನೀಡಿದರು.

ಹಿರಿಯರಿಂದ ಅಭಿನಂದನೆ

ಹಿರಿಯ ವರದಿಗಾರ ಅನಂತ್ ಕಾರ್ಕಳ ಮಾತನಾಡಿ, "ಕೆ. ವಿ. ಪ್ರಭಾಕರ್ ಅವರು ಮಾಧ್ಯಮ ಸಲಹೆಗಾರರಾದ ಬಳಿಕ ಮಾಧ್ಯಮ ಹಾಗೂ ಪತ್ರಿಕೆಗಳ ಸಮಸ್ಯೆಗಳ ಕುರಿತು ಸಮಗ್ರ ಅಧ್ಯಯನ ನಡೆಸಿ, ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಿ ಪರಿಹಾರಕ್ಕೆ ಸ್ಪಂದಿಸುವಂತೆ ಮಾಡಿದ್ದಾರೆ. ಅವರ ಕಾರ್ಯ ಶ್ಲಾಘನೀಯ," ಎಂದು ಹೇಳಿದರು.

ಈ ಸಂದರ್ಭದಲ್ಲಿ ನಿಂಗಪ್ಪ ಚವಡಿ, ಎಚ್. ಎಂ. ಶರೀಫನವರ್, ರಾಮಕೃಷ್ಣ ರೊಳ್ಳಿ, ಶರಣು ದೊಡ್ಡೂರ, ಪ್ರಕಾಶ್ ಕರಿ, ಸಂಜೀವ್ ಪಾಂಡ್ರೆ, ಗಣೇಶ್ ಪೈ, ರಮೇಶ್ ಭಜಂತ್ರಿ, ದೇವಪ್ಪ ಲಿಂಗದಾಳ, ಗಿರೀಶ್ ಕಮ್ಮಾರ್, ವಿನಯ್ ಪೂಜಾರ ಸೇರಿದಂತೆ ಹಲವರು ಉಪಸ್ಥಿತರಿದ್ದರು.

# ನಾಗಾವಿ ಕ್ರಾಸ್-ಬಸಾಪೂರ ಕ್ರಾಸ್ ರಸ್ತೆ ಗಿಡಗಳ ಟೊಂಗೆ ಕಟಾವಣೆ: ಆಕ್ಷೇಪಣೆ ಸಲ್ಲಿಕೆಗೆ ಅವಕಾಶ

■ ವಿಜಯಸಾಕ್ಷಿ ಸುದ್ದಿ, ಗದಗ

ಗದಗ ಶಾಖಾ ವ್ಯಾಪ್ತಿಯಲ್ಲಿ ಬರುವ ನಾಗಾವಿ ಕ್ರಾಸ್‌ನಿಂದ ಮುಳಗುಂದದ ಬಸಾಪೂರ ಕ್ರಾಸ್‌ವರೆಗೆ ರಸ್ತೆಯ ಎಡಬದಿಯಲ್ಲಿರುವ 47 ಗಿಡಗಳ ಟೊಂಗೆಗಳು ಹಾಗೂ ಬಲಬದಿಯಲ್ಲಿರುವ 45 ಗಿಡಗಳ ಟೊಂಗೆಗಳನ್ನು ಸೇರಿದಂತೆ ಒಟ್ಟು 92 ಗಿಡಗಳ ಟೊಂಗೆಗಳ ಕಟಾವಣೆ ಕೈಗೊಳ್ಳಲಾಗುತ್ತಿದೆ ಎಂದು ಸಾರ್ವಜನಿಕರ ಗಮನಕ್ಕೆ ತರಲಾಗಿದೆ.

ಈ ಕುರಿತು ತಕರಾರು ಅಥವಾ ಆಕ್ಷೇಪಣೆ ಸಲ್ಲಿಸಬಯಸುವವರು ಮಾರ್ಚ್ 5ರ ಒಳಗಾಗಿ ತಮ್ಮ ಲಿಖಿತ ಆಕ್ಷೇಪಣೆಯನ್ನು ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಉಪ ವಿಭಾಗ, ಬಿಂಕದಕಟ್ಟಿ ಕಚೇರಿಗೆ ಸಲ್ಲಿಸಬಹುದು.

ಇದೇ ವಿಷಯಕ್ಕೆ ಸಂಬಂಧಿಸಿ ಮಾರ್ಚ್ 6ರಂದು ಬೆಳಿಗ್ಗೆ 10:30ರಿಂದ ಮಧ್ಯಾಹ್ನ 12:30ರವರೆಗೆ ನಾಗಾವಿ ಕ್ರಾಸ್ ಮತ್ತು ಮುಳಗುಂದದ ಬಸಾಪೂರ ಕ್ರಾಸ್ ಪ್ರದೇಶದಲ್ಲೇ ಹಾಜರಾಗಿ ಲಿಖಿತ ರೂಪದಲ್ಲಿ ಆಕ್ಷೇಪಣೆ ಸಲ್ಲಿಸಲು ಅವಕಾಶ ನೀಡಲಾಗಿದೆ. ನಿಗದಿತ ದಿನಾಂಕದೊಳಗೆ ತಕರಾರು ಸಲ್ಲಿಸದಿದ್ದಲ್ಲಿ ನಂತರ ಬಂದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಹೆಚ್ಚಿನ ಮಾಹಿತಿಗಾಗಿ ಸಹಾಯಕ ಅರಣ್ಯ ಸಂರಕ್ಷಣಾಧಿಕಾರಿ, ಗದಗ ಉಪ ವಿಭಾಗ, ಬಿಂಕದಕಟ್ಟಿ ಕಚೇರಿಯನ್ನು ದೂರವಾಣಿ ಸಂಖ್ಯೆ: 08372-200978 ಮೂಲಕ ಸಂಪರ್ಕಿಸಬಹುದಾಗಿದೆ.

## ಕುಡಿಯುವ ನೀರಿಲ್ಲದೆ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರ ಪರದಾಟ!



**■ವಿಜಯಸಾಕ್ಷಿ ಸುದ್ದಿ, ಕೊಟ್ಟೂರು**

ತಾಲೂಕು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ಸಂಸ್ಥೆಯ ಸಾರ್ವಜನಿಕ ಬಸ್ ನಿಲ್ದಾಣದಲ್ಲಿ ಕುಡಿಯುವ ನೀರಿನ ವ್ಯವಸ್ಥೆಯೇ ಇಲ್ಲದೆ ಪ್ರಯಾಣಿಕರು ದಿನನಿತ್ಯ ತೊಂದರೆ ಅನುಭವಿಸುವಂತಾಗಿದೆ. ಈ ನಿರ್ಲಕ್ಷ್ಯದಿಂದ ಬೇಸತ್ತು ಸಾರ್ವಜನಿಕರು ಸಾರಿಗೆ ಇಲಾಖೆಯ ಅಧಿಕಾರಿಗಳಿಗೆ ಹಿಡಿಶಾಪ ಹಾಕುತ್ತಿದ್ದಾರೆ.

ಸರ್ಕಾರಿ ಬಸ್ ತಂಗುದಾಣವಾಗಿದ್ದರೂ ಶುದ್ಧ ಕುಡಿಯುವ ನೀರಿನ ಘಟಕವೇ ಇಲ್ಲದಿರುವುದು ಆಶ್ಚರ್ಯಕಾರಿಯಾಗಿದೆ. ದೂರದ ಊರುಗಳಿಂದ ಬರುವ ಮಹಿಳೆಯರು, ವೃದ್ಧರು, ಮಕ್ಕಳು ಸೇರಿದಂತೆ ಅನೇಕ ಪ್ರಯಾಣಿಕರು ನೀರಿನ ಕೊರತೆಯಿಂದ ಸಂಕಷ್ಟ ಅನುಭವಿಸುತ್ತಿದ್ದಾರೆ.

ಸ್ಥಿತಿವಂತರು ಹಾಗೂ ಮಧ್ಯಮ ವರ್ಗದವರು ಹಣ ನೀಡಿ ಅಂಗಡಿಗಳಲ್ಲಿ ಸಿಗುವ ಬಾಟಲ್ ನೀರನ್ನು ಖರೀದಿಸಿ ದಾಹ ತೀರಿಸಿಕೊಳ್ಳುವ ಪರಿಸ್ಥಿತಿ ಇದೆ. ಆದರೆ ಹಳ್ಳಿಗಳಿಂದ ಕೂಲಿ ಕೆಲಸಕ್ಕಾಗಿ ಪಟ್ಟಣಕ್ಕೆ ಬರುವ ಬಡ ಕಾರ್ಮಿಕರು ದುಡ್ಡು ಕೊಟ್ಟು ನೀರು ಖರೀದಿಸಲು ಸಾಧ್ಯವಾಗದೆ ಸಣ್ಣಪುಟ್ಟ ಹೋಟೆಲ್‌ಗಳನ್ನು ಅವಲಂಬಿಸುವಂತಾಗಿದೆ.

ಹಲವು ವರ್ಷಗಳಿಂದಲೂ ಈ ಸಮಸ್ಯೆ ಮುಂದುವರಿದಿದ್ದರೂ ಸಂಬಂಧಿಸಿದ ಅಧಿಕಾರಿಗಳು ಯಾವುದೇ ಶಾಶ್ವತ ಪರಿಹಾರಕ್ಕೆ ಮುಂದಾಗಿಲ್ಲ ಎಂಬ ಆಕ್ರೋಶ ಸಾರ್ವಜನಿಕ ವಲಯದಲ್ಲಿ ಕೇಳಿಬರುತ್ತಿದೆ.

ಇನ್ನಾದರೂ ಸಾರಿಗೆ ಇಲಾಖೆ ಎಚ್ಚೆತ್ತುಕೊಂಡು ಬಸ್ ನಿಲ್ದಾಣದಲ್ಲಿ ಶುದ್ಧ ಕುಡಿಯುವ ನೀರಿನ ಘಟಕ ಸ್ಥಾಪಿಸಿ ಪ್ರಯಾಣಿಕರ ಮೂಲಭೂತ ಅಗತ್ಯವನ್ನು ಪೂರೈಸಬೇಕೆಂಬುದು ಸಾರ್ವಜನಿಕರ ಒತ್ತಾಯವಾಗಿದೆ.

**ಗದಗ ಜಿಲ್ಲಾ ಕಾನಿಪದಿಂದ ಪತ್ರಕರ್ತೆ ತನುಜಾ ನಾಯಕಗೆ 'ಅವ್ವ ಸೇವಾ ಟ್ರಸ್ಟ್‌ನ ದತ್ತಿ ಪ್ರಶಸ್ತಿ ಪ್ರದಾನ**

# ತಂದೆ-ತಾಯಿಯನ್ನು ವಾತ್ಸಲ್ಯದಿಂದ ನೋಡಿಕೊಳ್ಳಿ

**■ವಿಜಯಸಾಕ್ಷಿ ಸುದ್ದಿ, ಗದಗ**

ತಾಯಿಯ ಪ್ರೀತಿಗೆ ಬೆಲೆ ಕಟ್ಟಲಾಗದು. ಹೀಗಾಗಿ ಪ್ರತಿಯೊಬ್ಬರೂ ತಮ್ಮ ತಂದೆ-ತಾಯಿಯನ್ನು ಪ್ರೀತಿ, ವಾತ್ಸಲ್ಯದಿಂದ ನೋಡಿಕೊಳ್ಳಿ ಎಂದು ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಹೇಳಿದರು.

ನಗರದ ಹೊರವಲಯದಲ್ಲಿ ಗ್ರಾಮ ಗಂಗೋತ್ರಿ ಆವರಣದಲ್ಲಿರುವ ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯದ ಕೌಶಲ್ಯ ವಿಕಾಸ ಭವನದ ಸಭಾಂಗಣದಲ್ಲಿ ಗುರುವಾರ ನಡೆದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘ ಜಿಲ್ಲಾ ಘಟಕದಲ್ಲಿ ಅವ್ವ ಸೇವಾ ಟ್ರಸ್ಟ್ ಮಾತೋಶ್ರೀ ಗಂಗವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ರಾಜ್ಯ ಮಟ್ಟದಲ್ಲಿ ಮಹಿಳಾ ಪತ್ರಕರ್ತರಿಗೆ ಸ್ಥಾಪಿಸಿರುವ 'ದತ್ತಿ ನಿಧಿ' ಪ್ರಶಸ್ತಿ ಪ್ರದಾನ ಹಾಗೂ 'ಗ್ರಾಮೀಣಾಭಿವೃದ್ಧಿಯಲ್ಲಿ ಪತ್ರಿಕೋದ್ಯಮದ ಪಾತ್ರ' ಕುರಿತ ವಿಚಾರ ಸಂಕಿರಣ ಉದ್ಘಾಟಿಸಿ ಮಾತನಾಡಿದರು.



### ತನುಜಾ ನಾಯಕಗೆ 'ದತ್ತಿ ನಿಧಿ' ಪ್ರಶಸ್ತಿ

ಹುಬ್ಬಳ್ಳಿಯ ಅವ್ವ ಸೇವಾ ಟ್ರಸ್ಟ್ ವತಿಯಿಂದ ಜಿಲ್ಲಾ ಕಾರ್ಯನಿರತ ಪತ್ರಕರ್ತರ ಸಂಘದಲ್ಲಿ ಮಾತೋಶ್ರೀ ಗುರವ್ವ ಶಿವಲಿಂಗಪ್ಪ ಹೊರಟ್ಟಿ ಸ್ಮರಣಾರ್ಥ ಸ್ಥಾಪಿಸಿರುವ ದತ್ತಿ ನಿಧಿಯ 2025-26ನೇ ಸಾಲಿನ ಪ್ರಶಸ್ತಿಯನ್ನು 'ಸಂಯುಕ್ತ ಕರ್ನಾಟಕ' ಪತ್ರಿಕೆಯ ಹಿರಿಯ ಉಪಸಂಪಾದಕಿ ತನುಜಾ ನಾಯಕ ಅವರಿಗೆ ನೀಡಿ ಗೌರವಿಸಲಾಯಿತು.

ಪತ್ರಕರ್ತರು ಪತ್ರಿಕೆಗಳ ಮೂಲಕ ಸಮಾಜದಲ್ಲಿ ಪರಿಣಾಮ ಬೀರುತ್ತಾರೆ. ಹೀಗಾಗಿ ಪತ್ರಿಕೆಗಳ ವರದಿ, ಮಾಹಿತಿ ಹಾಗೂ ಸಮಾಜದಲ್ಲಿ ಅತ್ಯುತ್ತಮ ಸೇವೆ ಮಾಡಿದವರನ್ನು ಗುರುತಿಸಿ ಪ್ರಶಸ್ತಿಗೆ ಆಯ್ಕೆ ಮಾಡಲಾಗುತ್ತಿದೆ. ಇದಕ್ಕೊಂದು ಪ್ರತ್ಯೇಕ ಸಮಿತಿ ರಚಿಸಿದ್ದೇವೆ. ನಮ್ಮ ತಾಯಿಯ ಸ್ಮರಣೆಯ ಹಿನ್ನೆಲೆಯಲ್ಲಿ ಪ್ರತಿವರ್ಷ ಸಾಧಕರಿಗೆ ಪ್ರಶಸ್ತಿ ನೀಡಲಾಗುತ್ತಿದೆ. ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾ ಘಟಕದ ಪತ್ರಿಕಾ ಭವನದ ಮೊದಲ ಮಹಡಿಗೆ ಐದು ಲಕ್ಷ ರೂ. ಅನುದಾನ ನೀಡಲಾಗುವುದು ಎಂದರು.

ಪ್ರಶಸ್ತಿ ಪ್ರದಾನ ಮಾಡಿದ ಮುಖ್ಯಮಂತ್ರಿಗಳ ಮಾಧ್ಯಮ ಸಲಹೆಗಾರ ಕೆ.ವಿ. ಪ್ರಭಾಕರ ಮಾತನಾಡಿ, ಅವ್ವನ ಹೆಸರಿನಲ್ಲಿ ಪ್ರಶಸ್ತಿ ನೀಡುತ್ತಿರುವುದು ರಾಜ್ಯಕ್ಕೆ ಮಾದರಿಯಾಗಿದೆ. ಎಷ್ಟೇ ದೊಡ್ಡ ಸ್ಥಾನಕ್ಕೇರಲಿ, ತಾಯಿಗಿಂತ ದೊಡ್ಡದು ಯಾವುದೂ ಇಲ್ಲ. 'ಅವ್ವ' ನಮ್ಮೆಲ್ಲರ ಸಾಧನೆ, ಯಶಸ್ಸಿಗೆ ಸ್ಫೂರ್ತಿ ಎಂದು ಹೇಳಿದರು.

ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ಗದಗ ಜಿಲ್ಲಾಧ್ಯಕ್ಷ ರಾಜು ಎಂ.ಹೆಬ್ಬಳ್ಳಿ ಮಾತನಾಡಿ, ಸಚಿವರಾದ ಎಚ್. ಕೆ. ಪಾಟೀಲರು ಗದುಗಿನಲ್ಲಿ ಕರ್ನಾಟಕದಲ್ಲಿಯೇ ಮಾದರಿ ಎನ್ನುವ ರೀತಿ ಪತ್ರಿಕಾ ಭವನ ನಿರ್ಮಾಣ ಮಾಡಿದ್ದಾರೆ. ಇದೀಗ ಮೊದಲ ಮಹಡಿಗೆ ಸಭಾಪತಿಗಳು ತಮ್ಮ ಪ್ರದೇಶಾಭಿವೃದ್ಧಿ ನಿಧಿಯಿಂದ ಅನುದಾನ ಮತ್ತು ಕೆ.ವಿ. ಪ್ರಭಾಕರ ಅವರು ಮುಖ್ಯಮಂತ್ರಿಗಳ ಮೂಲಕ ವಿಶೇಷ ಅನುದಾನ ಕೊಡಿಸುವುದರೊಂದಿಗೆ ಜಿಲ್ಲೆಯ ಕ್ಷೇಮಾಭಿವೃದ್ಧಿ ನಿಧಿಗೆ ಅನುದಾನ ಕೊಡಿಸುವಂತೆ ಮನವಿ ಮಾಡಿದರು.

ಮಹಾತ್ಮ ಗಾಂಧಿ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ವಿಶ್ವವಿದ್ಯಾಲಯ ಕುಲಪತಿ (ಪ್ರ) ಹಾಗೂ ಕುಲಸಚಿವ ಪ್ರೊ. ಸುರೇಶ ನಾಡಗೌಡರ, ಕರ್ನಾಟಕ ಕಾರ್ಯನಿರತ ಪತ್ರಕರ್ತರ ಸಂಘದ ರಾಜ್ಯ ಕಾರ್ಯದರ್ಶಿ ನಿಂಗಪ್ಪ ಚಾವಡಿ, ಜಿಲ್ಲಾಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಬಿ.ಬಿ. ಅಸೂಟಿ, ಅವ್ವ ಸೇವಾ ಟ್ರಸ್ಟ್ ಜಿಲ್ಲಾ ಸಂಚಾಲಕ ಬಸವರಾಜ ಧಾರವಾಡ, ಜಿಲ್ಲಾ ವಾರ್ತಾಧಿಕಾರಿ ವಸಂತ ಮಡ್ಲೂರು, ಕಾ.ನಿ.ಪ ಸಂಘದ ರಾಜ್ಯ ಕಾರ್ಯಕಾರಿಣಿ ಸದಸ್ಯ ಅರುಣಕುಮಾರ ಹಿರೇಮಠ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ಶರಣು ದೊಡ್ಡೂರ ಸೇರಿದಂತೆ ಸಂಘದ ಪದಾಧಿಕಾರಿಗಳು, ಜಿಲ್ಲೆಯ ಪತ್ರಕರ್ತರು, ವಿದ್ಯಾರ್ಥಿಗಳು ಇದ್ದರು.

**ತಾಲೂಕಾ ಹಿರಿಯ ನಾಗರಿಕರ ಸಂಘದಲ್ಲಿ ವಿಶೇಷ ಸಭೆ**

## ಹಿರಿಯರಿಗೆ ಪೊಲೀಸ್ ಇಲಾಖೆ 'ಆಸರೆ'



**■ವಿಜಯಸಾಕ್ಷಿ ಸುದ್ದಿ, ಲಕ್ಷ್ಮೇಶ್ವರ**

ಪಟ್ಟಣದ ಚಂಬಣ್ಣ ಬಾಳಿಕಾಯಿ ಅವರ ಮಿಲ್ ಆವರಣದಲ್ಲಿ ತಾಲೂಕಾ ಹಿರಿಯ ನಾಗರಿಕರು ಮತ್ತು ನಿವೃತ್ತ ನೌಕರರ ಸಂಘದ ವಿಶೇಷ ಸಭೆಯನ್ನು ನಡೆಸಲಾಯಿತು.

ಸಭೆಯಲ್ಲಿ ಡಿವೈಎಸ್‌ಪಿ ಮುರ್ತುಜಾ ಖಾದ್ರಿ ಹಿರಿಯ ನಾಗರಿಕರಿಗೆ ಇರುವ ಕಾನೂನುಗಳ ಬಗ್ಗೆ ಮಾಹಿತಿ ನೀಡಿ, ಹಿರಿಯರು ಸಮಾಜದ ಆಧಾರ ಸ್ತಂಭಗಳಿದ್ದಂತೆ. ಅವರಿಗಿರುವ ಜ್ಞಾನ, ಅನುಭವ ಈಗೀನವರಲ್ಲಿ ಕಾಣಲು ಸಾಧ್ಯವಿಲ್ಲ. ಆದರೆ ವಯಸ್ಸಾಗುತ್ತಿದ್ದಂತೆ ಅವರನ್ನು ಮಕ್ಕಳು ಕಡೆಗಣಿಸುವ ಕಾರ್ಯಗಳು ಬಹಳಷ್ಟು ಕಡೆಗಳಲ್ಲಿ ಕಾಣುತ್ತಿರುವದು ವಿಷಾದದ ಸಂಗತಿಯಾಗಿದೆ. ಅವರ ಕೊನೆಗಾಲದಲ್ಲಿಯೂ ಸಹ ಅವರ ಬೇಡಿಕೆಗಳನ್ನು ಈಡೇರಿಸುವವರು ಇಲ್ಲದಂತಾಗಿರುತ್ತದೆ.

ಈ ಹಿನ್ನೆಲೆಯಲ್ಲಿ ರಾಜ್ಯದಲ್ಲಿ ಒಂಟಿಯಾಗಿ ವಾಸಿಸುತ್ತಿರುವ ಮಹಿಳೆಯರು ಮತ್ತು ಹಿರಿಯ ನಾಗರಿಕರ ಸುರಕ್ಷತೆಯ ಬಗ್ಗೆ ಸದಾ ಆತಂಕ ಇದ್ದೇ ಇರುತ್ತದೆ. ಕೆಲವು ಕಡೆ ಸಮಾಜ ಕಂಟಕರಿಂದ ಕಿರುಕುಳ, ಮತ್ತೆ ಕೆಲವು ಕಡೆ ಸ್ವತಃ ಕುಟುಂಬದವರಿಂದಲೇ ನಿರ್ಲಕ್ಷ್ಯ. ಇಂತಹ ಆತಂಕವನ್ನು ದೂರ ಮಾಡಲು ಮತ್ತು ಅವರಿಗೆ ಧೈರ್ಯ ತುಂಬಲು ಕರ್ನಾಟಕ ಪೊಲೀಸ್ ಇಲಾಖೆ 'ಆಸರೆ' ಎಂಬ ವಿನೂತನ ಯೋಜನೆಯನ್ನು ಜಾರಿಗೆ ತಂದಿದ್ದು, ಇದರ ಬಗ್ಗೆ ಹಿರಿಯ ನಾಗರಿಕರು ತಿಳಿದುಕೊಂಡು ಅದರ ಉಪಯೋಗ ಪಡೆದುಕೊಳ್ಳಬಹುದಾಗಿದೆ. ಈ ಯೋಜನೆಯಡಿ ಪೊಲೀಸರೇ ಅಂತಹ ಮನೆಗಳಿಗೆ ಭೇಟಿ ನೀಡಿ ಯೋಗಕ್ಷೇಮ ವಿಚಾರಿಸುವದು, ತುರ್ತು ವೈದ್ಯಕೀಯ ಸೇವೆ, ಸರಕಾರಿ ಸೇವೆ ಇತ್ಯಾದಿಗಳ ಬಗ್ಗೆ ನೆರವಾಗುತ್ತಾರೆ ಎಂದರು.

ಹಿರಿಯರ ಬಗ್ಗೆ ನಿರ್ಲಕ್ಷ್ಯ ತೋರುವ ಕುಟುಂಬದ ಸದಸ್ಯರಿಗೆ ಪೊಲೀಸರು ತಿಳುವಳಿಕೆ ನೀಡುವ ಕಾರ್ಯವನ್ನು ಸಹ ಮಾಡುತ್ತಾರೆ. ಅದಕ್ಕಾಗಿ ಹಿರಿಯರು ಯಾವುದೇ ಕಾರಣಕ್ಕೂ ಧೈರ್ಯ ಕಳೆದುಕೊಳ್ಳುವ ಅವಶ್ಯಕತೆ ಇಲ್ಲ. ನಿಮ್ಮೊಂದಿಗೆ ಇಲಾಖೆಯ ಆಸರೆ ಸದಾ ಇರುತ್ತದೆ ಎಂದು ಹೇಳಿದರು.

ಸಭೆಯ ಅಧ್ಯಕ್ಷತೆಯನ್ನು ಸಂಘದ ಅಧ್ಯಕ್ಷ ಸಿ.ಆರ್. ಲಕ್ಕುಂಡಿಮಠ ವಹಿಸಿದ್ದರು. ಸಿ.ಪಿ.ಐ ಬಿ.ವೈ. ನ್ಯಾಮಗೌಡ್ರ, ಚನ್ನಪ್ಪ ಕೋಲಕಾರ, ಚಂಬಣ್ಣ ಬಾಳಿಕಾಯಿ, ಐ.ಎಸ್. ಮಡಿವಾಳರ, ಎಸ್.ಸಿ. ಅಳಗವಾಡಿ, ಡಾ. ಪಿ.ಡಿ. ತೋಟದ, ದೇವಣ್ಣ ಬಳಿಗಾರ, ಕುಬೇರಪ್ಪ ಮಹಾಂತಶೆಟ್ಟರ, ಅಶೋಕ ಪಡ್ನೀಸ್. ಎಸ್. ಎಸ್. ಪವಾಡಶೆಟ್ಟರ, ಸೂಗಿರಪ್ಪ ವಾಲಿಶೆಟ್ಟೆರ, ಶಿವಣ್ಣ ಕುಮಸಿ, ತೋಟಪ್ಪ ಸೂರಣಗಿ, ನಿಂಗಪ್ಪ ಬನ್ನಿ, ನೀಲಪ್ಪ ಕರ್ಜೆಕಣ್ಣವರ ಮುಂತಾದವರು ಹಾಜರಿದ್ದರು.

## ಮಣ್ಣಿನ ನೆರವಿಲ್ಲದೆ ಜಲಕೃಷಿ



**■ವಿಜಯಸಾಕ್ಷಿ ಸುದ್ದಿ, ನರೇಗಲ್ಲ**

ಅಲ್ಲಿದ್ದದ್ದು ನಿರುಪಯುಕ್ತ ಪಿವಿಸಿ ಪೈಪ್, ಪ್ಲಾಸ್ಟಿಕ್ ಲೋಟಗಳು, ಆ ಲೋಟಗಳಿಗೆ ಸೂಜಿಯಿಂದ ಮಾಡಿದ ತೂತುಗಳು. ಲೋಟದೊಳಗೆ ಎರೆಹುಳು ಗೊಬ್ಬರ. ಪಿವಿಸಿ ಪೈಪಿನೊಳಗೆ ನೀರು. ಸೊಪ್ಪಿನ ಬೀಜ. ಇವಿಷ್ಟನ್ನು ಉಪಯೋಗಿಸಿ ಮಣ್ಣಿನ ಸಹಾಯವಿಲ್ಲದೆ ಜಲಕೃಷಿ ಮಾಡುವುದು ಹೇಗೆ ಎಂಬುದನ್ನು ಪ್ರಯೋಗ ಮಾಡಿ ಮಕ್ಕಳಿಗೆ ತೋರಿಸಿದವರು ಶಾಲೆಯ ಶಿಕ್ಷಕ ವಿಜಯಕುಮಾರ.

ನರೇಗಲ್ಲ ಪಟ್ಟಣ ಪಂಚಾಯಿತಿ ವ್ಯಾಪ್ತಿಯ ಕೋಚಲಾಪುರದ ಹಿರಿಯ ಪ್ರಾಥಮಿಕ ಶಾಲೆಯ ಶಿಕ್ಷಕ ವಿಜಯಕುಮಾರ ಏನಾದರೊಂದು ಹೊಸ ವಿಷಯಕ್ಕೆ ತಮ್ಮನ್ನು ಒಡ್ಡಿಕೊಂಡು ಅದನ್ನು ಮಕ್ಕಳಿಗೆ ಕಲಿಸುವುದರಲ್ಲಿ ಸದಾ ಮುಂದು. ಈಗ ಅವರು ಮಣ್ಣಿನ ನೆರವಿಲ್ಲದೆ ಕೇವಲ ನೀರು ಮತ್ತು ಎರೆಹುಳು ಗೊಬ್ಬರವನ್ನು ಬಳಸಿಕೊಂಡು ಜಲಕೃಷಿ ಬಗ್ಗೆ ಮಕ್ಕಳಿಗೆ ಕಲಿಸುವುದನ್ನು ನೋಡುವುದೇ ಒಂದು ಸೊಗಸು.

ಇದು ನೈಜ ಕೃಷಿಗೆ ಒಂದು ಉದಾಹರಣೆಯಾಗಿದ್ದು, ವಿದೇಶಗಳಲ್ಲಿ ಈ ಕೃಷಿ ಜನಪ್ರಿಯತೆಯನ್ನು ಪಡೆದು ಸಫಲವಾಗಿದೆ ಎನ್ನುವುದು ವಿಜಯಕುಮಾರ ಅವರ ಅಭಿಪ್ರಾಯ. ಅಲ್ಲಿನ ಒಂದು ಪ್ರಯತ್ನವನ್ನು ಶಾಲೆಯ ಕಲಿಕಾ ಕೋಣೆಯಲ್ಲಿ ಮಾಡಿದ್ದೇವೆ. ಇನ್ನು ಕೆಲವೇ ದಿನಗಳಲ್ಲಿ ನಾವು ಈ ಲೋಟಗಳಲ್ಲಿ ಹಾಕಿರುವ ಬೀಜಗಳು ಮೊಳಕೆ ಒಡೆಯುತ್ತವೆ ಎಂಬುದು ಅವರ ಅಭಿಪ್ರಾಯ.

ಈ ನೂತನ ಪ್ರಯೋಗಗಳನ್ನು ಖಂಡಿತ ಇತರ ಶಾಲೆಯ ಮಕ್ಕಳು-ಶಿಕ್ಷಕರು ಹೋಗಿ ನೋಡಿ ತಿಳಿದುಕೊಂಡು ಬರಬಹುದು. ಅಷ್ಟೊಂದು ಸೊಗಸಾಗಿದೆ ಅವರ ಪ್ರಯೋಗ.

ಶಾಲಾ ಅವಧಿಯ ನಂತರ ನಾನು ಓದುತ್ತಿದ್ದ ಯಾವುದೋ ಒಂದು ಪುಸ್ತಕದಲ್ಲಿ ಜಲಕೃಷಿಯ ಬಗ್ಗೆ ಲೇಖನ ಓದಿದೆ. ಇದಕ್ಕೆ ಇಂಗ್ಲೀಷ್‌ನಲ್ಲಿ ಹೈಡ್ರೋಪೋನಿಕ್ಸ್ ಎನ್ನುತ್ತಾರೆ. ನಮ್ಮ ಶಾಲೆಯಲ್ಲಿಯೂ ಈ ಪ್ರಯೋಗ ಮಾಡಿ ಮಕ್ಕಳಿಗೇಕೆ ತೋರಿಸಬಾರದು ಎನಿಸಿತು. ಪ್ರಯತ್ನಿಸಿದ್ದೇನೆ. ಇದಕ್ಕೆ ಮುಖ್ಯ ಶಿಕ್ಷಕಿ ಎಸ್.ಬಿ. ಕೊಟ್ರಶೆಟ್ಟಿ, ವಿ.ಎ. ಕುಂಬಾರ ಮತ್ತು ಶೇಖರಪ್ಪ ಮಾರನಬಸರಿ ಸಹಕಾರ ನೀಡಿದ್ದಾರೆ ಎನ್ನುತ್ತಾರೆ ಶಿಕ್ಷಕ ವಿಜಯಕುಮಾರ ಡಿ.ಆರ್.

**ಹಿಂದೂ ಸಮ್ಮೇಳನ ಸಮಿತಿ ಕಾರ್ಯದರ್ಶಿ ರಾಘವೇಂದ್ರ ಹಬೀಬ ಮಾಹಿತಿ**

# ಹಿಂದೂ ಸಮಾಜೋತ್ಸವ, ಶೋಭಾಯಾತ್ರೆ ನಾಳೆ

**■ವಿಜಯಸಾಕ್ಷಿ ಸುದ್ದಿ, ಗದಗ**

ಹಿಂದೂ ಹಬ್ಬಗಳು ಹಾಗೂ ಮಹಾಪುರುಷರ ಜಯಂತ್ಯುತ್ಸವ ಆಚರಣೆ ಸಂದರ್ಭದಲ್ಲಿ ವಿರೋಧ ವ್ಯಕ್ತಪಡಿಸುವ ಮನಸ್ಥಿತಿ ದೇಶದಲ್ಲಿ ಹೆಚ್ಚಾಗುತ್ತಿದ್ದು, ಈ ಹಿನ್ನೆಲೆಯಲ್ಲಿ ಜಾತಿ, ಮತ, ಪಂಥ, ಪ್ರಾಂತಗಳನ್ನು ಬದಿಗಿರಿಸಿ ಸಮಸ್ತ ಹಿಂದೂ ಸಮಾಜ ಬಾಂಧವರಲ್ಲಿ ಜಾಗೃತಿ ಮೂಡಿಸುವ ನಿಟ್ಟಿನಲ್ಲಿ ಫೆ. 28ರ ಶನಿವಾರ ಗದಗ ನಗರದಲ್ಲಿ ಭವ್ಯ ಹಿಂದೂ ಸಮಾಜೋತ್ಸವವನ್ನು ಆಯೋಜಿಸಲಾಗಿದೆ ಎಂದು ಗದಗ ಶಿವಾನಂದ ಉಪನಗರ ಹಿಂದೂ ಸಮ್ಮೇಳನ ಸಮಿತಿ ಕಾರ್ಯದರ್ಶಿ ರಾಘವೇಂದ್ರ ಹಬೀಬ ಹೇಳಿದರು.

ಅವರು ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿದ್ದು, ಇತ್ತೀಚಿನ ದಿನಗಳಲ್ಲಿ ಹಿಂದೂಗಳನ್ನು ವಿರೋಧಿಸುವ ಮತ್ತು ಹತ್ತಿಕ್ಕುವ ಪ್ರಯತ್ನ ನಡೆಯುತ್ತಿದೆ. ಸಮಸ್ತ ಹಿಂದೂಗಳು ನಾವೆಲ್ಲ ಒಂದು ಎಂದಾದಾಗ ಸದೃಢ ಸಮಗ್ರ ಭಾರತ ನಿರ್ಮಾಣ ಸಾಧ್ಯವಾಗಲಿದ್ದು, ಸಮಾವೇಶ ಇದಕ್ಕೆ ಪೂರಕವಾಗಲಿದೆ ಎಂದರು.



> ಹಿಂದೂ ಸಮಾಜೋತ್ಸವದ ಭವ್ಯ ಶೋಭಾಯಾತ್ರೆಯಲ್ಲಿ ಸಹಕುಟುಂಬ ಪರಿವಾರದೊಡನೆ ಹಾಗೂ ಸಾಂಸ್ಕೃತಿಕ ಉಡುಗೆ-ತೊಡುಗೆ ತೊಟ್ಟು ಸುಮಾರು 500ಕ್ಕೂ ಹೆಚ್ಚು ಮಹಿಳೆಯರು ಪಾಲ್ಗೊಳ್ಳಲಿದ್ದು, ಚಿಕ್ಕಮಕ್ಕಳು ಸ್ವಾತಂತ್ರ್ಯ ಹೋರಾಟಗಾರರು ಮಹಾಪುರುಷರ ವೇಷಭೂಷಣ ಧರಿಸಿ ಪಾಲ್ಗೊಳ್ಳಲಿದ್ದಾರೆ.
>
> **- ಅಶ್ವಿನಿ ಜಗತಾಪ.**


ಫೆ. 28ರ ಶನಿವಾರ ಮಧ್ಯಾಹ್ನ 3 ಗಂಟೆಗೆ ಗದಗ ನಗರದ ಮುಳಗುಂದ ರಸ್ತೆಯ ಶ್ರೀ ಅಂಬಾಭವಾನಿ ದೇವಸ್ಥಾನದಿಂದ ಬೃಹತ್ ಶೋಭಾಯಾತ್ರೆ ಪ್ರಾರಂಭಗೊಳ್ಳಲಿದ್ದು, ತಾಯಿ ಭಾರತಾಂಬೆಯ ಜೊತೆಯಲ್ಲಿ ಮಹಾಪುರುಷರು ಹಾಗೂ ಸ್ವತಂತ್ರ್ಯ ಹೋರಾಟಗಾರರ ಭಾವಚಿತ್ರಗಳು ಶೋಭಾಯಾತ್ರೆಯಲ್ಲಿ ಇರಲಿವೆ. ಶೋಭಾಯಾತ್ರೆ ಮುಳಗುಂದನಾಕಾ, ತ್ರಿಕೂಟೇಶ್ವರ ದೇವಸ್ಥಾನ, ಜೋಡಮಾರುತಿ ದೇವಸ್ಥಾನ, ಪಟೇಲ ರಸ್ತೆ, ಬಸವೇಶ್ವರ ಸರ್ಕಲ್ ಮೂಲಕ ಸಭಾಸ್ಥಳ ವೀರಶೈವ ಜನರಲ್ ಲೈಬ್ರರಿ ಬಳಿ ಸಮಾರೋಪಗೊಳ್ಳಲಿದೆ.

ನಂತರ ಸಂಜೆ 6 ಗಂಟೆಗೆ ಜರುಗುವ ಹಿಂದೂ ಸಮಾಜೋತ್ಸವ ವೇದಿಕೆ ಕಾರ್ಯಕ್ರಮದಲ್ಲಿ ವಿವಿಧ ಮಠಾಧೀಶರು ಪಾಲ್ಗೊಳ್ಳಲಿದ್ದು, ದಿಕ್ಸೂಚಿ ಭಾಷಣವನ್ನು ಜಗದೀಶ ಕಾರಂತ ಮಾಡಲಿದ್ದು, ಸಮಸ್ತ ಹಿಂದೂ ಸಮಾಜ ಬಾಂಧವರು ಶೋಭಾಯಾತ್ರೆ ಹಾಗೂ ವೇದಿಕೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವಂತೆ ಕೋರಲಾಗಿದೆ ಎಂದರು.

ಈ ಸಂದರ್ಭದಲ್ಲಿ ಅರುಣ ವೆರ್ಣೇಕರ, ಸೂರಜ ನಾಯ್ಕರ, ರಾಮಚಂದ್ರ ಪಾಲನಕರ, ರತ್ನಾ ಕುರುಗೋಡ, ಅಶ್ವಿನಿ ಜಗತಾಪ ಮುಂತಾದವರಿದ್ದರು.

## ಸಚಿವ ಎಚ್ ಕೆ ಪಾಟೀಲ್ ಜಿಲ್ಲಾ ಪ್ರವಾಸ: ಇಂದು ಗದಗದಲ್ಲಿ ಜನತಾದರ್ಶನ

**■ವಿಜಯಸಾಕ್ಷಿ ಸುದ್ದಿ, ಗದಗ**



ರಾಜ್ಯದ ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆ ಸಚಿವರು ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಎಚ್ ಕೆ ಪಾಟೀಲ್ ಅವರು ಫೆಬ್ರವರಿ 27 ರಂದು ಜಿಲ್ಲಾ ಪ್ರವಾಸ ಕೈಗೊಳ್ಳಲಿದ್ದಾರೆ.

ಅವರು ಬೆಳಿಗ್ಗೆ 6.30 ಗಂಟೆಗೆ ಹುಬ್ಬಳ್ಳಿಯಿಂದ ರಸ್ತೆ ಮಾರ್ಗವಾಗಿ ಹೊರಟು ಬೆಳಿಗ್ಗೆ 7.30 ಗಂಟೆಗೆ ಗದಗಿಗೆ ಆಗಮಿಸಲಿದ್ದಾರೆ.

ಬೆಳಿಗ್ಗೆ 10 ಗಂಟೆಯಿಂದ ಸಂಜೆ 5 ಗಂಟೆಯವರೆಗೆ ಗದಗ ಜಿಲ್ಲಾಡಳಿತ ಭವನದಲ್ಲಿ ನಡೆಯುವ ಜಿಲ್ಲಾ ಮಟ್ಟದ ಜನತಾದರ್ಶನ ಕಾರ್ಯಕ್ರಮದಲ್ಲಿ ಭಾಗವಹಿಸಿ ಸಾರ್ವಜನಿಕರಿಂದ ಅಹವಾಲುಗಳನ್ನು ಸ್ವೀಕರಿಸಲಿದ್ದಾರೆ.

ಸಚಿವರು ಗದಗದಲ್ಲಿ ವಾಸ್ತವ್ಯ ಮಾಡುವರು ಎಂದು ಪ್ರಕಟಣೆ ತಿಳಿಸಿದೆ.

## ಮುಖ್ಯಮಂತ್ರಿ ಚಿನ್ನದ ಪದಕಕ್ಕೆ ಗದಗ ಜಿಲ್ಲೆಯ ಕಿರಣ್ ಕುಮಾರ್ ಕಟಗಿ ಆಯ್ಕೆ

**■ವಿಜಯಸಾಕ್ಷಿ ಸುದ್ದಿ, ಗದಗ**



ತೆಲಂಗಾಣ, ಮಹಾರಾಷ್ಟ್ರ, ಮಧ್ಯಪ್ರದೇಶ ಹಾಗೂ ಕರ್ನಾಟಕ ರಾಜ್ಯಗಳಲ್ಲಿ ನಡೆದ ಚುನಾವಣಾ ಸಂದರ್ಭಗಳು ಹಾಗೂ ವಿವಿಧ ಜಾತ್ರೆ-ಹಬ್ಬಗಳ ಬಂದೋಬಸ್ತ್ ಕರ್ತವ್ಯಗಳಲ್ಲಿ ಪೊಲೀಸ್ ಇಲಾಖೆಯೊಂದಿಗೆ ಸಮನ್ವಯ ಸಾಧಿಸಿ ಶ್ರೇಷ್ಠ ಸೇವೆ ಸಲ್ಲಿಸಿದ್ದಕ್ಕಾಗಿ 2025ನೇ ಸಾಲಿನ ಮುಖ್ಯಮಂತ್ರಿ ಚಿನ್ನದ ಪದಕಕ್ಕೆ ಗದಗ ಜಿಲ್ಲಾ ಬೋಧಕಾರ ಕಿರಣ್ ಕುಮಾರ್ ಕಟಗಿ ಅವರನ್ನು ಕರ್ನಾಟಕ ಸರ್ಕಾರ ಆಯ್ಕೆ ಮಾಡಿದೆ.

ಚುನಾವಣೆಗಳಂತಹ ಸೂಕ್ಷ್ಮ ಸಂದರ್ಭಗಳಲ್ಲಿ ಕಾನೂನು-ಸುವ್ಯವಸ್ಥೆ ಕಾಪಾಡುವ ಕಾರ್ಯದಲ್ಲಿ ಅವರು ತೋರಿದ ನಿಷ್ಠೆ, ಜವಾಬ್ದಾರಿ ಮತ್ತು ತುರ್ತು ಪರಿಸ್ಥಿತಿಗಳಲ್ಲಿ ಸಮರ್ಥ ನಿರ್ವಹಣೆ ಗಮನಾರ್ಹವಾಗಿದೆ. ವಿವಿಧ ಜಾತ್ರೆ ಹಾಗೂ ಹಬ್ಬಗಳ ವೇಳೆ ಜನಸಂದಣಿಯನ್ನು ನಿಯಂತ್ರಿಸುವಲ್ಲಿ ಮತ್ತು ಪೊಲೀಸ್ ಇಲಾಖೆಯೊಂದಿಗೆ ಪರಿಣಾಮಕಾರಿ ಸಹಕಾರ ನೀಡುವಲ್ಲಿ ಅವರ ಸೇವೆ ಮೆಚ್ಚುಗೆಗೆ ಪಾತ್ರವಾಗಿದೆ.

ಈ ಸಾಧನೆಗೆ ಜಿಲ್ಲಾ ಸಮದೇಶಕರು, ಗೃಹರಕ್ಷಕ ದಳದ ಸದಸ್ಯರು ಹಾಗೂ ಸಿಬ್ಬಂದಿ ವರ್ಗ ಕಿರಣ್ ಕುಮಾರ್ ಕಟಗಿ ಅವರಿಗೆ ಅಭಿನಂದನೆಗಳನ್ನು ಸಲ್ಲಿಸಿದ್ದಾರೆ.

ಜಿಲ್ಲೆಯ ಗೃಹರಕ್ಷಕ ದಳದ ಪರವಾಗಿ ಈ ಗೌರವ ದೊರೆತಿರುವುದು ಹೆಮ್ಮೆಯ ವಿಷಯವಾಗಿದ್ದು, ಇತರರಿಗೆ ಪ್ರೇರಣೆಯಾಗಿದೆ.

## ಗ್ರಹಲಕ್ಷ್ಮೀ ಹಣ ದೇವಾಲಯ ನಿರ್ಮಾಣಕ್ಕೆ ದೇಣಿಗೆ: ತಿಮ್ಮಾಪುರ ಮಹಿಳೆಯರ ಅಭೂತಪೂರ್ವ ನಿರ್ಧಾರ!

**■ವಿಜಯಸಾಕ್ಷಿ ಸುದ್ದಿ, ಗದಗ**

ಗದಗ ತಾಲೂಕಿನ ತಿಮ್ಮಾಪುರ ಗ್ರಾಮದಲ್ಲಿ ಸಾಮಾಜಿಕ-ಆಧ್ಯಾತ್ಮಿಕ ಬದ್ಧತೆಯೊಂದು ಗಮನಸೆಳೆಯುವ ಘಟನೆ ನಡೆದಿದೆ. ಕರ್ನಾಟಕ ರಾಜ್ಯ ಸರ್ಕಾರ ಮಹಿಳೆಯರಿಗೆ ನೀಡುತ್ತಿರುವ ಗ್ರಹಲಕ್ಷ್ಮಿ ಯೋಜನೆಯಡಿ ಮಹಿಳೆಯರ ಖಾತೆಗೆ ಜಮಾದ ರೂ.2000 ನೆರವು ಮೊತ್ತವನ್ನು ಗ್ರಾಮದಲ್ಲಿನ ಶ್ರೀ ರೇಣುಕಾದೇವಿ ಎಲ್ಲಮ್ಮನ ದೇವಸ್ಥಾನ ಕಟ್ಟಡ ಕಾಮಗಾರಿಗೆ ದೇಣಿಗೆಯಾಗಿ ನೀಡುವ ನಿರ್ಧಾರವನ್ನು ಗ್ರಾಮ ಮಹಿಳೆಯರು ಕೈಗೊಂಡಿದ್ದಾರೆ.



ಗ್ರಾಮದ ಎಲ್ಲಾ ಫಲಾನುಭವಿಗಳು ತಮ್ಮ ಖಾತೆಗೆ ಜಮಾ ಆದ ಮೊತ್ತವನ್ನು ಸ್ವಯಂಪ್ರೇರಿತವಾಗಿ ದೇವಸ್ಥಾನದ ಅಭಿವೃದ್ಧಿಗೆ ಸಮರ್ಪಿಸಿದ್ದು, ಗ್ರಾಮದಲ್ಲಿ ಭಕ್ತಿಭಾವ ಮತ್ತು ಏಕತೆ ಮೆರೆಯಲಾಗಿದೆ. ಮಹಿಳೆಯರ ಈ ತೀರ್ಮಾನಕ್ಕೆ ಗ್ರಾಮಸ್ಥರು ಮೆಚ್ಚುಗೆ ವ್ಯಕ್ತಪಡಿಸಿದ್ದು, ದೇವಸ್ಥಾನದ ನಿರ್ಮಾಣ ಕಾರ್ಯಕ್ಕೆ ದೊಡ್ಡ ಮಟ್ಟದ ಬೆಂಬಲ ಸಿಕ್ಕಂತಾಗಿದೆ.

ಗ್ರಾಮದ ಹಿರಿಯರು ಹಾಗೂ ಯುವಕರು ಮಹಿಳೆಯರ ಈ ದಾನಶೀಲತೆಯನ್ನು ಶ್ಲಾಘಿಸಿದ್ದು, ಗ್ರಾಮಾಭಿವೃದ್ಧಿ ಹಾಗೂ ಧಾರ್ಮಿಕ ಕಾರ್ಯಗಳಲ್ಲಿ ಮಹಿಳೆಯರ ಪಾತ್ರ ಮತ್ತಷ್ಟು ಬಲವಾಗುತ್ತಿರುವುದನ್ನು ಇದು ತೋರಿಸುತ್ತದೆ ಎಂದು ತಿಳಿಸಿದ್ದಾರೆ. ದೇವಸ್ಥಾನ ಕಟ್ಟಡ ಕಾಮಗಾರಿ ಶೀಘ್ರ ಪೂರ್ಣಗೊಳ್ಳಲಿದೆ ಎಂದು ಗ್ರಾಮ ಸಮಿತಿ ತಿಳಿಸಿದೆ.

VIJAYA SAKSHI KANNADA DAILY MORNING Editor, Printer, Publisher, & Owned by : Hussainsab M. Shareefanavar, H.No. 130/154, Balaji Nagar, Near Ring Road, Gadag-582103, Dist : Gadag- Karnataka Printed at : Sai Printing Press, Near Joda Maruti Temple, Gadag-582101, Dist : Gadag- Karnataka